ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 29 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಗುರುವಾರ ದಿನಾಂಕ : 06-08-2026 ಪುಟ : 04 ಬೆಲೆ : 2-00

## ಪ್ರತಿಭಟನಾಕಾರರ ವಿರುದ್ಧ ಅತಿಯಾದ ಬಲಪ್ರಯೋಗ ಬೇಡ: ಪೊಲೀಸರಿಗೆ ಸುಪ್ರೀಂ ಕೋರ್ಟ್ ಪಾಠ


ನವದೆಹಲಿ: ಪ್ರತಿಭಟಿಸುವ ವಿದ್ಯಾರ್ಥಿಗಳ ವಿರುದ್ಧ ಅತಿಯಾದ ಬಲಪ್ರಯೋಗ ಬೇಡ ಎಂದು ದೆಹಲಿ ಪೊಲೀಸರಿಗೆ ಸುಪ್ರೀಂ ಕೋರ್ಟ್ ಬುಧವಾರ ಕಿವಿಮಾತು ಹೇಳಿದೆ. ಪ್ರತಿಭಟನೆಗಳನ್ನು ನಿಭಾಯಿಸುವ ಸಂದರ್ಭದಲ್ಲಿ ಕಾನೂನು ಜಾರಿ ಸಂಸ್ಥೆಗಳು ಸಂಯಮದಿಂದ ವರ್ತಿಸಬೇಕು ಎಂದು ಸುಪ್ರೀಂ ಕೋರ್ಟ್ ಬುಧವಾರ ಒತ್ತಿ ಹೇಳಿದ್ದು, ಕೆಲವು 'ದಾರಿ ತಪ್ಪಿದ ಅಂಶಗಳು' ಕಲ್ಲು ತೂರಾಟ ನಡೆಸಿದರೂ ಯುವಕರಿಗೆ ಸೂಕ್ತ ಸಲಹೆ ನೀಡಿ, ಅವರನ್ನು ಸಮಾಧಾನಪಡಿಸುವ ಪ್ರಯತ್ನ ಮಾಡಬೇಕು ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹಾಗೂ ನ್ಯಾಯಮೂರ್ತಿಗಳಾದ ಜಾಯ್‌ಮಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ಪೀಠವು ಜುಲೈ 20ರಂದು ನಡೆದ 'ಸಂಸದ್ ಚಲೋ' ಮೆರವಣಿಗೆಯ ಆಯೋಜಕರ ವಿರುದ್ಧ ಹಿಂಸಾಚಾರಕ್ಕೆ ಪ್ರಚೋದನೆ ನೀಡಿದ ಆರೋಪದ ಕುರಿತು ಕ್ರಮ ಕೈಗೊಳ್ಳುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆಗೆ ಅಂಗೀಕರಿಸಿತು. ಇದೇ ವಿಷಯಕ್ಕೆ ಸಂಬಂಧಿಸಿದಂತೆ ಈಗಾಗಲೇ ಬಾಕಿ ಇರುವ ಮತ್ತೊಂದು ಅರ್ಜಿಯೊಂದಿಗೆ ಇದನ್ನೂ ಜೋಡಿಸಿತು.

ಅರ್ಜಿದಾರ ಹಾಗೂ ನಿವೃತ್ತ ವಾಯುಪಡೆಯ ಅಧಿಕಾರಿ ಮನೀಷ್ ಕುಮಾರ್ ಸೋಲಂಕಿ ಪರ ವಕೀಲ ರಿಜ್ವಾನ್ ಅಹ್ಮದ್ ವಾದ ಮಂಡಿಸಿ, ಪ್ರತಿಭಟನೆ ನಡೆದು 15 ದಿನಗಳಾದರೂ ಆಯೋಜಕರ ವಿರುದ್ಧ ಯಾವುದೇ ಹೊಣೆಗಾರಿಕೆ ನಿಗದಿಯಾಗಿಲ್ಲ ಎಂದು ಪ್ರಶ್ನಿಸಿದರು. "ಅವರು ವಾಹಿನಿಯಿಂದ ವಾಹಿನಿಗೆ ತೆರಳಿ ಪ್ರಚೋದನಕಾರಿ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಪರಿಸ್ಥಿತಿಯನ್ನು ಶಾಂತಗೊಳಿಸುವ ಬದಲು ಮತ್ತಷ್ಟು ಉಲ್ಬಣಗೊಳಿಸುತ್ತಿದ್ದಾರೆ" ಎಂದು ಅವರು ನ್ಯಾಯಾಲಯಕ್ಕೆ ತಿಳಿಸಿದರು. ರಾಜಸ್ಥಾನದಲ್ಲಿ ಇತ್ತೀಚೆಗೆ ನಡೆದ ಕಾನೂನು ಮತ್ತು ಸುವ್ಯವಸ್ಥೆ ಘಟನೆ ಉಲ್ಲೇಖಿಸಿದ ವಕೀಲರು, ಪ್ರತಿಭಟನಾಕಾರರನ್ನು ಸಮಾಧಾನಪಡಿಸುವ ಹೆಸರಿನಲ್ಲಿ ಸರ್ಕಾರಗಳು ಅತಿಯಾದ ಮೃದು ಧೋರಣೆ ತಾಳಬಾರದು ಎಂದು ವಾದಿಸಿದರು. ರಾಷ್ಟ್ರ ರಾಜಧಾನಿಯಲ್ಲಿ ಅಧಿಕಾರಿಗಳು ಅತಿಯಾದ ಸಡಿಲಿಕೆ ತೋರಿದರೆ, ದೇಶದ ಇತರ ಭಾಗಗಳಲ್ಲಿಯೂ ಇದೇ ರೀತಿಯ ಪ್ರತಿಭಟನೆಗಳನ್ನು ನಿಭಾಯಿಸುವಲ್ಲಿ ಅದು ಮಾದರಿಯಾಗಬಹುದು ಎಂದು ಅವರು ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ಕೆಲವರು ಕಲ್ಲು ತೂರಾಟದಲ್ಲಿ ಭಾಗಿಯಾಗಿದ್ದರೂ ಯುವ ಪ್ರತಿಭಟನಾಕಾರರಿಗೆ ಸಲಹೆ ನೀಡಿ, ಅವರನ್ನು ಶಾಂತಗೊಳಿಸುವುದೇ ಸೂಕ್ತ ಮಾರ್ಗ ಎಂದು ಹೇಳಿದರು. **2ನೇ ಪುಟಕ್ಕೆ..**



# ಲೋಕಸಭೆಯಲ್ಲಿ "ಬ್ಯಾಂಕರ್ ಬುಕ್ಸ್ ಎವಿಡೆನ್ಸ್ ಬಿಲ್"

## ರಾಜ್ಯಸಭೆಯಲ್ಲಿ 'ಸುಪ್ರೀಂ' ನ್ಯಾಯಾಧೀಶರ ಹೆಚ್ಚಳ ಮಸೂದೆ ಅಂಗೀಕಾರ!



ನವದೆಹಲಿ: ಸಂಸತ್ತಿನ ಮಳೆಗಾಲದ ಅಧಿವೇಶನದಲ್ಲಿ ಸರ್ಕಾರ ಮತ್ತು ವಿರೋಧ ಪಕ್ಷದ ನಡುವೆ ತೀವ್ರ ವಾಗ್ವಾದ ಮುಂದುವರೆದಿದೆ. ವಿರೋಧ ಪಕ್ಷಗಳು ವಿವಿಧ ವಿಷಯಗಳ ಕುರಿತು ಘೋಷಣೆಗಳನ್ನು ಕೂಗುವ ಮೂಲಕ ಎರಡೂ ಸದನಗಳ ಕಲಾಪಕ್ಕೆ ಅಡ್ಡಿಪಡಿಸುವ ತಂತ್ರವನ್ನು ಮುಂದುವರಿಸಿದ್ದರೂ, ಸರ್ಕಾರವು ಗದ್ದಲವನ್ನು ಲೆಕ್ಕಿಸದೆ ತನ್ನ ಶಾಸಕಾಂಗ ಕಾರ್ಯವನ್ನು ಮುಂದುವರಿಸುತ್ತಿದೆ. ಲೋಕಸಭೆಯಲ್ಲಿ 'ಬ್ಯಾಂಕರ್ ಬುಕ್ಸ್ ಎವಿಡೆನ್ಸ್ ಬಿಲ್, 2026' ಮತ್ತು ರಾಜ್ಯಸಭೆಯಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಧೀಶರ ಹೆಚ್ಚಳ ಮಸೂದೆಯನ್ನು ವಿರೋಧ ಪಕ್ಷದ ಭಾರೀ ಗದ್ದಲದ ನಡುವೆ ಯಾವುದೇ ಚರ್ಚೆಯಿಲ್ಲದೆ ಧ್ವನಿ ಮತದ ಮೂಲಕ ಅಂಗೀಕರಿಸಿದೆ.


ಲೋಕಸಭೆಯಲ್ಲಿ ಹಿರಿಯ ಸದಸ್ಯ ಜಗದಾಂಬಿಕಾ ಪಾಲ್ ಅಧ್ಯಕ್ಷತೆ ವಹಿಸಿದ್ದರು. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ

**2ನೇ ಪುಟಕ್ಕೆ...**

### ಉಭಯ ಸದನಗಳಲ್ಲೂ 'ಸುಪ್ರೀಂ' ನ್ಯಾಯಾಧೀಶರ ಹೆಚ್ಚಳ ಮಸೂದೆಗೆ ಅಂಗೀಕಾರ

ಲೋಕಸಭೆ ಬಳಿಕ ಇದೀಗ ರಾಜ್ಯಸಭೆಯೂ ಸುಪ್ರೀಂ ಕೋರ್ಟ್ (ನ್ಯಾಯಾಧೀಶರ ಸಂಖ್ಯೆ) ತಿದ್ದುಪಡಿ ಮಸೂದೆ, 2026 ಅನ್ನು ಅಂಗೀಕರಿಸಲಾಗಿದೆ. ಈ ಮಸೂದೆಯು ಸುಪ್ರೀಂ ಕೋರ್ಟ್ ನ್ಯಾಯಾಧೀಶರ ಸಂಖ್ಯೆಯನ್ನು ಪ್ರಸ್ತುತ 34 ರಿಂದ 38ಕ್ಕೆ ಹೆಚ್ಚಿಸುವ ಗುರಿಯನ್ನು ಹೊಂದಿದೆ. ಮೇ 11ರಂದು ಭಾರತದ ಮುಖ್ಯ ನ್ಯಾಯಮೂರ್ತಿ ನ್ಯಾಯಮೂರ್ತಿ ಸೂರ್ಯ ಕಾಂತ್ ಅವರು ಪ್ರಧಾನಿಗೆ ಪತ್ರ ಬರೆದು, ಸುಪ್ರೀಂ ಕೋರ್ಟ್‌ನಲ್ಲಿ ದಾಖಲಾಗುತ್ತಿರುವ ಹೊಸ ಪ್ರಕರಣಗಳ ಸಂಖ್ಯೆಯಲ್ಲಿ ಭಾರಿ ಹೆಚ್ಚಳ ಮತ್ತು ಪ್ರಕರಣಗಳ ವಿಲೇವಾರಿ ದರವನ್ನು ಕಾಯ್ದುಕೊಳ್ಳಲು ಹೆಚ್ಚುವರಿ ನ್ಯಾಯಾಧೀಶರ ಅಗತ್ಯತೆಯ ಬಗ್ಗೆ ಮಾಹಿತಿ ನೀಡಿದ್ದರು ಎಂದು ಅರ್ಜುನ್ ರಾಮ್ ಮೇಘವಾಲ್ ರಾಜ್ಯಸಭೆಗೆ ತಿಳಿಸಿದರು.

## ರಾಜ್ಯದಲ್ಲಿ 1.11 ಕೋಟಿ ಜನರು ಮತದಾರರ ಪಟ್ಟಿಯಿಂದ ಔಟ್?



SIR - Processing of Enumeration Forms Information as on 05.08.2026 02:00 PM

(DISTRIBUTION & DIGITIZATION)

House to House visits by BLO: 30.06.2026 to 08.08.2026

Overview
- Total Mapped: 91.61%
- EF Printed 100%
- EF Distributed 100.00%
- EF Digitised 79.93%

ELECTORS AS ON 16.06.2026: 5,54,32,314

EF DISTRIBUTION

| Total EF Distributed | Pending distribution |
|---|---|
| 5,54,32,314 | 0 |
| 100.00% | 0.00% |

EF DIGITIZATION

| Total EF DIGITIZED | Marked as ASDDO | Pending digitization | Avg. Digitization / day | |
|---|---|---|---|---|
| 4,43,04,632 | 1,11,04,705 | 22,977 | 11,97,422 | |
| 79.93% | 20.03% | 0.04% | 2.16% | |
| Untraceable / Absent Electors | Permanently Shifted Electors | Death Electors | Already Enrolled Electors | Others |
| 16,30,012 | 66,64,943 | 16,30,872 | 6,89,904 | 4,88,974 |
| 2.94% | 12.02% | 2.94% | 1.24% | 0.88% |

Enumeration Form Digitisation Status (including ASDDO)

| | >0% - <10% | >=10% - <25% | >=25% - <50% | >=50% - <75% | >=75% - <90% | >=90% - <100% | 100% |
|---|---|---|---|---|---|---|---|
| POLLING STATIONS | | | | | 22 | 1,241 | 57,787 |
| ASSEMBLY CONSTITUENCIES | | | | | | 49 | 175 |
| DISTRICTS | | | | | | 15 | 19 |



ಬೆಂಗಳೂರು: ರಾಜ್ಯದಲ್ಲಿ ಮುಕ್ತಾಯದ ಹಂತಕ್ಕೆ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (Special Intensive Revision – SIR) ಪ್ರಕ್ರಿಯೆ ಮುಕ್ತಾಯ ಹಂತ ತಲುಪಿದ್ದು 1.11 ಕೋಟಿ ಜನರು ಮತದಾರರ ಪಟ್ಟಿಯಿಂದ ಕೈ ಬಿಡುವ ಸಾಧ್ಯತೆಯಿದೆ. ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್, ಶೇ. 80ರಷ್ಟು ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದೆ. ರಾಜ್ಯದಲ್ಲಿ 1.11 ಕೋಟಿ ಮತದಾರರು ASDDO (Absentee, Shifted, Dead, Duplicate, and Others) ಪಟ್ಟಿಗೆ ಸೇರ್ಪಡೆಯಾಗಿದ್ದಾರೆ. ಹೆಸರು ಕೈಬಿಡದಿರಲು ಮತದಾರರು ಫಾರ್ಮ್-6 ಸಲ್ಲಿಸಬೇಕೆಂದು ಮನವಿ ಮಾಡಿದ್ದಾರೆ.ರಾಜ್ಯದಲ್ಲಿ 5.54 ಕೋಟಿ ಮತದಾರರಿದ್ದು ಈ ಪೈಕಿ 4.43 ಕೋಟಿ ಜನರು ಗಣತಿ ನಮೂನೆ ಭರ್ತಿ ಮಾಡಿದ್ದಾರೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಶೇಕಡಾವಾರು ಅತಿ ಹೆಚ್ಚು ಮತದಾರರು 'ASDDO' ಪಟ್ಟಿಗೆ ಸೇರ್ಪಡೆಯಾಗಿದ್ದಾರೆ ಎಂದು ತಿಳಿಸಿದರು.

# ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಸೇರಿ 29 ಮಂದಿಗೆ ಶೀಘ್ರವೇ ಸಿಐಡಿ ನೋಟಿಸ್

ಬೆಂಗಳೂರು : ಪಶುವೈದ್ಯಾಧಿಕಾರಿ ನೇಮಕಾತಿ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರುದಾರರ ವಿಚಾರಣೆ ಪೂರ್ಣಗೊಂಡಿದ್ದು, ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಸೇರಿದಂತೆ ಅಕ್ರಮವಾಗಿ ಆಯ್ಕೆಯಾಗಿದ್ದಾರೆ ಎನ್ನಲಾದ 29 ಮಂದಿ ಅಭ್ಯರ್ಥಿಗಳಿಗೆ ಶೀಘ್ರವೇ ನೋಟಿಸ್ ಜಾರಿಗೊಳಿಸಲು ಸಿಐಡಿ ಅಧಿಕಾರಿಗಳು ಸಜ್ಜಾಗಿದ್ದಾರೆ. ಹಾಸನ ಮೂಲದ ದೂರುದಾರ ಮಂಜುನಾಥ್ ಅವರನ್ನು ಸಿಐಡಿ ಕಚೇರಿಯಲ್ಲಿ ವಿಚಾರಣೆ ನಡೆಸಿದ ತನಿಖಾಧಿಕಾರಿಗಳು ಅವರ ಹೇಳಿಕೆ ದಾಖಲಿಸಿಕೊಂಡಿದ್ದಾರೆ. ಈ ವೇಳೆ ಮಂಜುನಾಥ್ ಅವರು ಮಧ್ಯವರ್ತಿಗಳು ಹಾಗೂ ಅಭ್ಯರ್ಥಿಗಳ ನಡುವಿನ ಧ್ವನಿಮುದ್ರಿಕೆ ಸೇರಿದಂತೆ ಹಲವು ಪ್ರಮುಖ ದಾಖಲೆಗಳನ್ನು ತನಿಖಾ




ತಂಡಕ್ಕೆ ಒದಗಿಸಿದ್ದಾರೆ.

ಪಶುವೈದ್ಯಾಧಿಕಾರಿ ಹುದ್ದೆ ಪಡೆದಿರುವ 29 ಮಂದಿ ಅಭ್ಯರ್ಥಿಗಳ ಪೈಕಿ ಹಲವರ ಮೇಲೆ ಗಂಭೀರ ಅನುಮಾನಗಳಿವೆ. ಪರೀಕ್ಷೆ ನಡೆಯುವ ಹಿಂದಿನ ದಿನ ಈ ಅಭ್ಯರ್ಥಿಗಳು ತಮ ಮೊಬೈಲ್ ಫೋನ್‌ಗಳನ್ನು ಸ್ವಿಚ್ ಆಫ್ ಮಾಡಿಕೊಂಡಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ. ಹೀಗಾಗಿ, ಆ ನಿರ್ಣಾಯಕ ದಿನದಂದು ಇವರು ಎಲ್ಲಿದ್ದರು ? ಯಾರನ್ನು ಭೇಟಿಯಾಗಿದ್ದರು ಎಂಬ ಬಗ್ಗೆ ಸಿಐಡಿ ಮಾಹಿತಿ ಕಲೆಹಾಕಿದೆ. ಮಾಜಿ ಅಧ್ಯಕ್ಷರಿಗೆ ಕುತ್ತು: ಕೆಪಿಎಸ್‌ಸಿ ಕಚೇರಿ ಮೇಲೆ ನಡೆಸಲಾದ ದಾಳಿಯ ವೇಳೆ ವಶಪಡಿಸಿಕೊಳ್ಳಲಾದ ಓಎಂಆರ್ ಶೀಟ್‌ಗಳ ಪರಿಶೀಲನೆ ಈಗ ಅಂತಿಮ ಹಂತದಲ್ಲಿದೆ. ಈ ವರದಿ ಹಾಗೂ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಮುಂದಿನ ಎರಡುಮೂರು ದಿನಗಳಲ್ಲಿ ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ್ ಅವರಿಗೆ ನೋಟಿಸ್ ನೀಡಿ ವಿಚಾರಣೆಗೆ ಕರೆಯಲು

**2ನೇ ಪುಟಕ್ಕೆ...**

## ಡಿಕೆಶಿ ಸಂಪುಟದಲ್ಲಿ 34ನೇ ಸಚಿವರು ಯಾರಾಗುತ್ತಾರೆ?

# ಕಾಂಗ್ರೆಸ್ ನಾಯಕತ್ವಕ್ಕೇ ಕಗ್ಗಂಟು

ಬೆಂಗಳೂರು: ಸಚಿವ ಸಂಪುಟ ವಿಸ್ತರಣೆಯಾಗಿ 24 ಗಂಟೆಗಳಿಗೂ ಹೆಚ್ಚು ಸಮಯ ಕಳೆದಿದ್ದರೂ, ಸಚಿವ ಸಂಪುಟದಲ್ಲಿನ 34ನೇ ಸಚಿವರ ಸ್ಥಾನ ಇನ್ನೂ ಖಾಲಿ ಉಳಿದಿದ್ದು, ಅದು ಇದೀಗ ಜಾತಿ ಸಮೀಕರಣ, ಬಣ ನಿಷ್ಠೆ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಕ್ಷದೊಳಗಿನ ಪ್ರಭಾವದ ಪರೀಕ್ಷೆಯಾಗಿ ಪರಿಣಮಿಸಿದೆ.

ನಿನ್ನೆ ಸಿದ್ದರಾಮಯ್ಯ ಅವರು ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ್ ಅವರೊಂದಿಗೆ ಸಾರ್ವಜನಿಕ ವೇದಿಕೆಯನ್ನು ಹಂಚಿಕೊಂಡಿರುವುದು ಹೊಸ ರಾಜಕೀಯ ಊಹಾಪೋಹಗಳಿಗೆ ಕಾರಣವಾಯಿತು. ಮೂಲಗಳ ಪ್ರಕಾರ, ಇದು ಕಾಕತಾಳೀಯವಾಗಿರಲಿಲ್ಲ. ಖಾಲಿ ಇರುವ ಸಚಿವ ಸ್ಥಾನಕ್ಕೆ ಶಿವಣ್ಣನವರ್ ಅವರ ಹೆಸರನ್ನು ಸಿದ್ದರಾಮಯ್ಯ ಅವರೇ ವೈಯಕ್ತಿಕವಾಗಿ ಹೈಕಮಾಂಡ್‌ಗೆ ಶಿಫಾರಸು ಮಾಡಿದ್ದರು ಎನ್ನಲಾಗಿದೆ.

ಆದರೆ, ಆ ಶಿಫಾರಸಿನ ಹೊರತಾಗಿಯೂ ಅಂತಿಮವಾಗಿ ಚರ್ಚೆಗೆ ಬಂದ ಹೆಸರು ಬದಲಾಗಿದ್ದು, ವಾಸ್ತವವಾಗಿ ಏನಾಯಿತು ಎಂಬುದು ಇನ್ನೂ ನಿಗೂಢವಾಗಿಯೇ ಉಳಿದಿದೆ ಎಂದು ಮೂಲಗಳು ತಿಳಿಸಿವೆ.

'ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್' ಶಿವಣ್ಣನವರ್ ಅವರನ್ನು ಸಂಪರ್ಕಿಸಿದಾಗ, ಹೈಕಮಾಂಡ್ ಏನು ನಿರ್ಧಾರ ಕೈಗೊಳ್ಳುತ್ತದೆ ಎಂಬುದನ್ನು ಕಾದು ನೋಡಬೇಕು ಎಂದಷ್ಟೇ ಅವರು ಪ್ರತಿಕ್ರಿಯಿಸಿದರು. ತಮ್ಮ ಹೆಸರು ಸಚಿವ ಸ್ಥಾನಕ್ಕೆ ಪರಿಗಣನೆಯಲ್ಲಿದೆಯೇ ಎಂಬುದನ್ನು ಅವರು ದೃಢಪಡಿಸಲಿಲ್ಲ,

**2ನೇ ಪುಟಕ್ಕೆ...**



# ಅರ್ಹ ಮತದಾರರು ಮತದಾರರ ಪಟ್ಟಿಯಿಂದ ವಂಚಿತರಾಗಬಾರದು : ಸಿಇಒ ಗಿತ್ತೆ ಮಾಧವ ವಿಠ್ಠಲರಾವ್

ದಾವಣಗೆರೆ : ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ನವೀಕರಣ ಹಾಗೂ ಡಿಜಿಟಲೀಕರಣ ಪ್ರಕ್ರಿಯೆ ಭರದಿಂದ ಸಾಗುತ್ತಿದ್ದು, ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಸಾರ್ವಜನಿಕರಿಗೆ ತಕ್ಷಣವೇ ತಮ್ಮ ಗಣಕೀಕರಣ ನಮೂನೆಗಳನ್ನು ಸಲ್ಲಿಸುವಂತೆ ಜಿಲ್ಲಾ ಪಂಚಾಯಿತಿ ಕಾರ್ಯ ನಿರ್ವಾಹಕಾಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ಅವರು ಮನವಿ ಮಾಡಿದರು.




ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ವಿಶೇಷ ಸಮಗ್ರ ಪರಿಷ್ಕರಣೆಯ-2026 ಜಾಗೃತಿ ಅಭಿಯಾನ ಕುರಿತು ಗುಂಡಿ ವೃತ್ತದಿಂದ ರೈಲು ನಿಲ್ದಾಣದವರೆಗೆ ಹಮ್ಮಿಕೊಂಡಿದ್ದ ವಿಶೇಷ ಸಮಗ್ರ ಪರಿಷ್ಕರಣೆಯ-2026 ರ ಸ್ಥಬ್ದಚಿತ್ರದೊಂದಿಗಿನ ಜಾಥಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗಣಕೀಕರಣ ನಮೂನೆಗಳನ್ನು ಸಲ್ಲಿಸದೆ ಇರುವ ಸಾರ್ವಜನಿಕರು ತಕ್ಷಣವೇ ತಮ್ಮ ವ್ಯಾಪ್ತಿಯ ಬಿ.ಎಲ್.ಓ ಅವರಿಗೆ ಭರ್ತಿ ಮಾಡಿದ ಫಾರ್ಮ್

**2ನೇ ಪುಟಕ್ಕೆ..**

# ಸಚಿವರು ಯಾರೊಬ್ಬರ ಸ್ವತ್ತಲ್ಲ, ರಾಜ್ಯದ ಏಳು ಕೋಟಿ ಜನರ ಆಸ್ತಿ: ಕೆ.ಬಿ. ಕಲ್ಲೇರುದ್ರೇಶ್



ಜಗಳೂರು: ಅಪ್ಪರ್ ಭದ್ರಾ ನೀರಾವರಿ ಯೋಜನೆಯ ಜಗಳೂರು ಶಾಖಾ ಕಾಲುವೆಗೆ (ಬ್ರಾಂಚ್ ಕ್ಯಾನಾಲ್) ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವಂತೆ ನೀರಾವರಿ ಸಚಿವ ರಾಮಲಿಂಗ ರೆಡ್ಡಿ ಅವರಿಗೆ ಮನವಿ ಸಲ್ಲಿಸಿರುವುದಾಗಿ ತಿಳಿಸಿದ ಜೆಡಿಎಸ್ ರಾಜ್ಯ ಮುಖಂಡ ಕೆ.ಬಿ. ಕಲ್ಲೇರುದ್ರೇಶ್, ಸಚಿವರು ಯಾವುದೇ ಪಕ್ಷದವರ ಸ್ವತ್ತಲ್ಲ; ಅವರು ಕರ್ನಾಟಕದ ಏಳು ಕೋಟಿ ಜನರ ಸಚಿವರಾಗಿದ್ದು, ಅಭಿವೃದ್ಧಿ ವಿಚಾರವಾಗಿ ಯಾರೇ ಆಗಲಿ ಅವರನ್ನು ಭೇಟಿ ಮಾಡುವ ಹಕ್ಕು ಹೊಂದಿದ್ದಾರೆ ಎಂದು ಹೇಳಿದರು.ಪಟ್ಟಣದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಪ್ಪರ್ ಭದ್ರಾ ನೀರಾವರಿ ಯೋಜನೆಯ ಜಗಳೂರು ಬ್ರಾಂಚ್ ಕ್ಯಾನಾಲ್‌ಗೆ ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವಂತೆ ನೀರಾವರಿ ಸಚಿವ ರಾಮಲಿಂಗ ರೆಡ್ಡಿ ಅವರಿಗೆ ಪತ್ರ ಬರೆದು ಭೇಟಿಯಾಗಿರುವುದು ನಿಜ. ಆದರೆ "ನಮ್ಮ ಸಚಿವರನ್ನು ಏಕೆ ಭೇಟಿ ಮಾಡಬೇಕು" ಎಂದು ಇತ್ತೀಚೆಗೆ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಸಕ ದೇವೇಂದ್ರಪ್ಪ ನೀಡಿರುವ ಹೇಳಿಕೆ ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಚಾಮುಂಡೇಶ್ವರಿ ಕ್ಷೇತ್ರವು ರಾಮಲಿಂಗ ರೆಡ್ಡಿಯವರ ಕ್ಷೇತ್ರವಾಗಿರಬಹುದು. ಆದರೆ ಸಚಿವರಾಗಿ ಅವರು ಇಡೀ ರಾಜ್ಯದ ಏಳು ಕೋಟಿ ಜನರನ್ನು ಪ್ರತಿನಿಧಿಸುತ್ತಿದ್ದು, ಅಭಿವೃದ್ಧಿ ವಿಚಾರವಾಗಿ ಯಾವುದೇ ನಾಗರಿಕ ಅಥವಾ ಜನಪ್ರತಿನಿಧಿ ಅವರನ್ನು ಭೇಟಿ ಮಾಡಬಹುದು ಎಂದು ಹೇಳಿದರು.

ತಾವು ಸಲ್ಲಿಸಿದ ಮನವಿಯನ್ನು ಕಸದ ಬುಟ್ಟಿಗೆ ಎಸೆಯಲಾಗಿದೆ ಎಂಬ ಆರೋಪ ಹಾಸ್ಯಾಸ್ಪದವಾಗಿದೆ. ಸಂಸ್ಕಾರ, ಸಹನೆ ಹಾಗೂ ಮಾನವೀಯತೆ ಹೊಂದಿರುವವರು ಯಾವುದೇ ಮನವಿಯನ್ನು ಈ ರೀತಿ ನಿರ್ಲಕ್ಷಿಸುವುದಿಲ್ಲ ಎಂದು ತಿರುಗೇಟು ನೀಡಿದರು. ತಾವು ಸಲ್ಲಿಸಿದ ಮನವಿಯನ್ನು ಪರಿಗಣಿಸಿದ ಸಚಿವರು ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಪತ್ರ ಬರೆದಿರುವುದು ಅಭಿವೃದ್ಧಿಗೆ ಪೂರಕವಾದ ಬೆಳವಣಿಗೆಯಾಗಿದೆ ಎಂದು ಹೇಳಿದರು.

ತಾಲ್ಲೂಕಿನ ಅಭಿವೃದ್ಧಿ ಹಾಗೂ ಭದ್ರಾ ಮೇಲ್ದಂಡೆ ನೀರಾವರಿ ಯೋಜನೆ ಕುರಿತು ಸಮಗ್ರವಾಗಿ ಚರ್ಚಿಸಲು ಸಚಿವರ ಭೇಟಿಗೆ ಸಮಯ ಕೋರಿದ್ದು, ಸಮಯ ದೊರೆತರೆ ರೈತ ಮುಖಂಡರು ಹಾಗೂ ಹೋರಾಟಗಾರರೊಂದಿಗೆ ಭೇಟಿ ನೀಡುವುದಾಗಿ ತಿಳಿಸಿದರು.

# ಎಡೆಬಿಡದೆ ಸುರಿದ ಮಳೆಗೆ ಹರಿಹರ ಜನಜೀವನ ಅಸ್ತವ್ಯಸ್ತ
## ರಸ್ತೆಗಳು ಜಲಾವೃತ–ವ್ಯಾಪಾರ ವಹಿವಾಟಿಗೆ ಹೊಡೆತ
## ಶಾಲಾ ಮಕ್ಕಳು, ವಾಹನ ಸವಾರರ ಪರದಾಟ

ಹರಿಹರ : ಮಂಗಳವಾರ ಮಧ್ಯಾಹ್ನದಿಂದ ಸಂಜೆವರೆಗೆ ಎಡೆಬಿಡದೆ ಸುರಿದ ಭಾರೀ ಮಳೆಯಿಂದ ಹರಿಹರ ನಗರದಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿತು.ರಸ್ತೆಗಳು ಜಲಾವೃತಗೊಂಡು ವಾಹನ ಸಂಚಾರಕ್ಕೆ ಅಡಚಣೆಯಾದರೆ, ವ್ಯಾಪಾರ ವಹಿವಾಟು ಕುಂಠಿತಗೊಂಡು ವ್ಯಾಪಾರಿಗಳು ನಷ್ಟ ಅನುಭವಿಸುವಂತಾಯಿತು.

ಸುಮಾರು ಮೂರು ಗಂಟೆಗಳ ಕಾಲ ನಿರಂತರವಾಗಿ ಸುರಿದ ಮಳೆಯಿಂದ ನಗರದ ಪ್ರಮುಖ ರಸ್ತೆಗಳು ನೀರಿನಿಂದ ಆವೃತವಾಗಿದ್ದವು. ಸಂತೆ ಪ್ರದೇಶದಲ್ಲಿ ತರಕಾರಿ ವ್ಯಾಪಾರಿಗಳು ಮಳೆಯಿಂದ ತೀವ್ರ ತೊಂದರೆ ಅನುಭವಿಸಿದರು. ಪಾದಚಾರಿ ಮಾರ್ಗದ ವ್ಯಾಪಾರಿಗಳು ಗಿರಾಕಿಗಳಿಲ್ಲದೆ ಸಂಕಷ್ಟಕ್ಕೆ ಸಿಲುಕಿದರು.

ನಗರದಲ್ಲಿ ದುರ್ವಾಸನೆ ಬೀರುತ್ತಿದ್ದ ಚರಂಡಿಗಳು ಮಳೆ ನೀರಿನಿಂದ ಸ್ವಚ್ಛಗೊಂಡ ಪರಿಣಾಮ ಸಾರ್ವಜನಿಕರು ಕೊಂಚ ನಿರಾಳರಾದರು. ಆದರೆ ಹಲವು ಕಡೆ ಚರಂಡಿಗಳು ತುಂಬಿ ಹರಿದ ಪರಿಣಾಮ ರಸ್ತೆಗಳಲ್ಲಿ ನೀರು ನಿಂತು ಸಂಚಾರಕ್ಕೆ ಅಡಚಣೆ ಉಂಟಾಯಿತು.

ಮಧ್ಯಾಹ್ನ ಆರಂಭವಾದ ಮಳೆ ಸಂಜೆವರೆಗೂ ಮುಂದುವರಿದ



ಕಾರಣ ಶಾಲೆ,ಕಾಲೇಜುಗಳಿಗೆ ತೆರಳಿದ್ದ ವಿದ್ಯಾರ್ಥಿಗಳು ಮನೆಗೆ ಮರಳಲು ಪರದಾಡಿದರು.ಮಕ್ಕಳನ್ನು ಶಾಲೆಯಿಂದ ಕರೆತರಲು ಪಾಲಕರು ಹರಸಾಹಸ ಪಡಬೇಕಾಯಿತು. ಶಿಕ್ಷಕರು ಹಾಗೂ ಸರ್ಕಾರಿ ನೌಕರರು ಕೂಡ ಮಳೆಯಲ್ಲಿಯೇ ತಮ್ಮ ಮನೆಗಳತ್ತ ತೆರಳಿದ ದೃಶ್ಯ ಸಾಮಾನ್ಯವಾಗಿತ್ತು.

ಮಳೆಯ ಪರಿಣಾಮ ನಗರದಲ್ಲಿ ತಂಪಾದ ವಾತಾವರಣ ನಿರ್ಮಾಣವಾಗಿದ್ದರೂ, ಅಂಗಡಿ–ಮುಂಗಟ್ಟುಗಳು ತೆರೆದಿದ್ದರೂ ವ್ಯಾಪಾರ ಚುರುಕಾಗಿರಲಿಲ್ಲ. ಜನರು ಮನೆಯಿಂದ ಹೊರಬರಲು ಹಿಂದೇಟು ಹಾಕಿದ್ದರಿಂದ ವ್ಯಾಪಾರ ವಹಿವಾಟು ಕುಂಠಿತಗೊಂಡಿತು.

ರಸ್ತೆಗಳಲ್ಲಿ ನೀರು ನಿಂತಿದ್ದರಿಂದ ತಗ್ಗು–ದಿಣ್ಣೆಗಳು ಕಾಣದೆ ವಾಹನ ಸವಾರರು ಎಚ್ಚರಿಕೆಯಿಂದ ಸಂಚರಿಸಬೇಕಾಯಿತು. ಜಾಕೆಟ್ ಧರಿಸಿ, ಕೊಡೆ ಹಿಡಿದು ಸಂಚರಿಸುತ್ತಿದ್ದ ಜನರ ದೃಶ್ಯ ನಗರದೆಲ್ಲೆಡೆ ಕಂಡುಬಂತು.

ಇದೇ ವೇಳೆ, ತಾಲೂಕಿನಾದ್ಯಂತ ಸುರಿದ ಉತ್ತಮ ಮಳೆ ರೈತರಲ್ಲಿ ಹೊಸ ಆಶಾಭಾವನೆ ಮೂಡಿಸಿದೆ. ಇದುವರೆಗೆ ಅಲ್ಪ ಪ್ರಮಾಣದ ಮಳೆಯ ನಡುವೆಯೇ ಮಳೆರಾಯನನ್ನು ನಂಬಿ ಬಿತ್ತನೆ ಮಾಡಿದ್ದ ರೈತರು ಇದೀಗ ಉತ್ತಮ ಮಳೆ ಸುರಿದಿರುವುದರಿಂದ ಬೆಳೆಗಳ ಬೆಳವಣಿಗೆಯ ಬಗ್ಗೆ ನಿರಾಳರಾಗಿದ್ದಾರೆ. ತಡವಾಗಿಯಾದರೂ ಉತ್ತಮ ಮಳೆಯಾಗಿರುವುದು ರೈತರ ಮುಖದಲ್ಲಿ ಸಂತಸ ಮೂಡಿಸಿದೆ.

ಒಂದನೇ ಪುಟದಿಂದ..

# ಡಿಕೆಶಿ ಸಂಪುಟದಲ್ಲಿ 34ನೇ ಸಚಿವರು ಯಾರಾಗುತ್ತಾರೆ?
## ಕಾಂಗ್ರೆಸ್ ನಾಯಕತ್ವಕ್ಕೇ ಕಗ್ಗಂಟು

ಅಲ್ಲದೆ ಅದನ್ನು ತಳ್ಳಿಹಾಕಲೂ ಇಲ್ಲ.

ಮೂಲಗಳ ಪ್ರಕಾರ, ಸಿದ್ದರಾಮಯ್ಯ ಅವರು ಶಿವಣ್ಣನವರ್ ಹಾಗೂ ಕೊನೆಯ ಕ್ಷಣದಲ್ಲಿ ಸಚಿವ ಸ್ಥಾನದಿಂದ ಕೈಬಿಡಲಾದ ಗಾಯತ್ರಿ ಶಾಂತೇಗೌಡ ಅವರೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ. ಈ ಬೆಳವಣಿಗೆ, ಮಾಜಿ ಮುಖ್ಯಮಂತ್ರಿ ಒಂದೇ ಸಮಯದಲ್ಲಿ ಎರಡು ಕಡೆ ಉಂಟಾಗಿರುವ ಅಸಮಾಧಾನವನ್ನು ಶಮನಗೊಳಿಸುವ ಪ್ರಯತ್ನ ನಡೆಸುತ್ತಿರುವ ಸೂಚನೆ ಎಂದು ವಿಶ್ಲೇಷಿಸಲಾಗುತ್ತಿದೆ.

ಇದಕ್ಕೆ ಒಂದು ಸಂಭಾವ್ಯ ಪರಿಹಾರವಾಗಿ ಗಾಯತ್ರಿ ಶಾಂತೇಗೌಡ ಅವರನ್ನು ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿಯಾಗಿ ನೇಮಿಸುವ ಪ್ರಸ್ತಾಪವೂ ಚರ್ಚೆಯಲ್ಲಿದೆ ಎನ್ನಲಾಗಿದೆ. ಇದರಿಂದ ಅವರಿಗೆ ಸಮಾಧಾನಕರ ಹುದ್ದೆ ಸಿಗುವುದರ ಜೊತೆಗೆ, ಸಚಿವ ಸಂಪುಟದಲ್ಲಿ ಉತ್ತರ ಕರ್ನಾಟಕದ ಕುರುಬ ಸಮುದಾಯದ ನಾಯಕರಿಗೆ ಒಂದು ಸ್ಥಾನ ಖಾಲಿಯಾಗಲಿದೆ. ಇದು ನಿಜವಾದರೆ, ಯಾರೂ ಸಂಪೂರ್ಣವಾಗಿ ವಂಚಿತರಾಗದಂತೆ, ಎಲ್ಲರಿಗೂ ಏನಾದರೂ ಸಿಗುವಂತೆ ಹಾಗೂ ಜಾತಿ ಸಮತೋಲನದ ಸಂದೇಶವೂ ಹೋಗುವಂತಹ ಕರ್ನಾಟಕ ಕಾಂಗ್ರೆಸ್‌ನ ಸಾಂಪ್ರದಾಯಿಕ ರಾಜಕೀಯ ಪರಿಹಾರ ಎಂದು ವಿಶ್ಲೇಷಿಸಲಾಗುತ್ತಿದೆ.

ಉತ್ತರ ಕರ್ನಾಟಕದ ಕುರುಬ ಸಮುದಾಯದ ನಾಯಕರಿಗೆ ಸಚಿವ ಸ್ಥಾನ ನೀಡಬೇಕೆಂಬ ಒತ್ತಾಯ ಕೇವಲ ಭಾವನಾತ್ಮಕ ಕಾರಣಗಳಿಂದ ಮಾತ್ರವಲ್ಲ ಎಂದು ಮೂಲಗಳು ತಿಳಿಸಿವೆ. ಬಸವರಾಜ ಶಿವಣ್ಣನವರ್, ರಾಘವೇಂದ್ರ ಹಿಟ್ನಾಳ್ ಅಥವಾ ಗವಿಯಪ್ಪ ಎಚ್.ಆರ್. ಅವರಲ್ಲಿ ಯಾರಿಗಾದರೂ ಸಚಿವ ಸ್ಥಾನ ಸಿಕ್ಕರೆ, ಸಚಿವ ಸಂಪುಟದಲ್ಲಿ ಹಿಂದುಳಿದ ವರ್ಗದ ಸಚಿವರ ಸಂಖ್ಯೆ ಏಳಕ್ಕೆ ಏರಿಕೆಯಾಗಲಿದೆ. ಸಿದ್ದರಾಮಯ್ಯ ಅವರ ಸಾಮಾಜಿಕ–ರಾಜಕೀಯ ನೆಲೆಯ ಪ್ರಮುಖ ಆಧಾರವೆಂದು ಪರಿಗಣಿಸಲ್ಪಡುವ ಕುರುಬ ಸಮುದಾಯಕ್ಕೆ ಸರ್ಕಾರದಲ್ಲಿ ಇದುವರೆಗೆ ಸಿಗದಷ್ಟು ಪ್ರಬಲ ಪ್ರಾತಿನಿಧ್ಯ ದೊರೆಯಲಿದೆ ಎನ್ನಲಾಗಿದೆ.

ಹಿಂದುಳಿದ ವರ್ಗ/ಕುರುಬ ಮತಬ್ಯಾಂಕ್ ಸಿದ್ದರಾಮಯ್ಯ ಅವರ ರಾಜಕೀಯ ಗುರುತಿನೊಂದಿಗೆ ಅವಿನಾಭಾವ ಸಂಬಂಧ ಹೊಂದಿದೆ ಎಂದು ರಾಜಕೀಯ ವಲಯದಲ್ಲಿ ಪರಿಗಣಿಸಲಾಗಿದೆ. ಕುರುಬ ಸಮುದಾಯದವರಷ್ಟೇ ಅಲ್ಲದೆ, ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯಗಳ ಆಕಾಂಕ್ಷಿಗಳೂ ಖಾಲಿ ಇರುವ ಏಕೈಕ ಸಚಿವ ಸ್ಥಾನಕ್ಕಾಗಿ ತಮ್ಮ ಹಕ್ಕು ಮಂಡಿಸುತ್ತಿದ್ದಾರೆ. ಇದರಿಂದ ಯಾರನ್ನೂ ಅಸಮಾಧಾನಗೊಳಿಸದೇ ಒಬ್ಬರನ್ನು ಆಯ್ಕೆ ಮಾಡುವುದು ಕಾಂಗ್ರೆಸ್ ಹೈಕಮಾಂಡ್‌ಗೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ಗಾಯತ್ರಿ ಶಾಂತೇಗೌಡ ಅವರನ್ನು ಕೊನೆಯ ಕ್ಷಣದಲ್ಲಿ ಕೈಬಿಟ್ಟಿದ್ದರಿಂದ ಉಂಟಾದ ಅಸಮಾಧಾನವನ್ನು ಗಮನಿಸಿದರೆ, ಈ ನಿರ್ಧಾರವು ರಾಜಕೀಯವಾಗಿ ಸಾಕಷ್ಟು ಅಪಾಯವನ್ನು ಒಳಗೊಂಡಿದೆ ಎಂಬ ಅರಿವು ಪಕ್ಷದ ನಾಯಕತ್ವಕ್ಕಿದೆ ಎಂದು ಮೂಲಗಳು ತಿಳಿಸಿವೆ.

# ಕೆಪಿಎಸ್‌ಪಿ ಸದಸ್ಯರನ್ನು ವಜಾ ಮಾಡಿ ದಕ್ಷ ಮತ್ತು ಪ್ರಾಮಾಣಿಕ ವ್ಯಕ್ತಿಗಳಿಗೆ ನೇಮಕಕ್ಕೆ ಆಗ್ರಹ




ದಾವಣಗೆರೆ : ರಾಜ್ಯದಲ್ಲಿ ನಡೆಯುತ್ತಿರುವ ನೇಮಕಾತಿಗಳು ಭ್ರಷ್ಟಾಚಾರದಿಂದ ಕೂಡಿದ್ದು ಅರ್ಹರು ಮತ್ತು ಬಡವರು ಸರ್ಕಾರಿ ಉದ್ಯೋಗದಿಂದ ವಂಚಿತರಾಗುತ್ತಿದ್ದಾರೆ, ಅಕ್ರಮಗಳಿಗೆ ಮೂಲ ಕಾರಣ ಕರ್ನಾಟಕ ಲೋಕಸೇವಾ ಆಯೋಗ ಇದರಿಂದ ನೇಮಕಾತಿ ಮಾಡಿಕೊಳ್ಳುವುದು ಅಕ್ರಮಗಳಿಗೆ ಕಾರಣವಾಗಿದೆ, ಎಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ರಾಜ್ಯ ಸಂಘಟನಾ ಕಾರ್ಯದರ್ಶಿ ಕೆಎಸ್ ವೀರಭದ್ರಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಲೋಕಸೇವಾ ಆಯೋಗವು ತಾನೇ ಪ್ರಕಟಿಸಿದ ವೇಳಾಪಟ್ಟಿಯಂತೆ ನೇಮಕಾತಿ ನಡೆಸುತ್ತಿಲ್ಲ ಇತ್ತೀಚಿನ ವರ್ಷಗಳಲ್ಲಿ ಕೆಪಿಎಸ್‌ಸಿ ಮೂಲಕ ನೇಮಕ ಮಾಡಿಕೊಳ್ಳುವುದು ಅಕ್ರಮಗಳಿಗೆ ಕಾರಣವಾಗಿದೆ ಮತ್ತು ತಡವಾಗುತ್ತಿದೆ ಎಂಬ ಕಾರಣ ನೀಡಿ ಕರ್ನಾಟಕ ಪರೀಕ್ಷಾ ಮಂಡಳಿಯ ಮೂಲಕ ನೇಮಕಾತಿಯನ್ನು ಸರ್ಕಾರ ಅನೇಕ ಇಲಾಖೆಗಳು ಮಾಡಿಕೊಂಡಿವೆ ಎಂದು ತಿಳಿಸಿದರು.

1998 ರ ಗೆಜೆಟೆಡ್ ಅಧಿಕಾರಿಗಳ ನೇಮಕಾತಿಯಿಂದ ಆರಂಭಗೊಂಡ ಕ್ರಮಗಳ ಸರಮಾಲೆ ಇಲ್ಲಿಯವರೆಗೂ ನಿರಂತರವಾಗಿ ನಡೆದುಕೊಂಡು ಬರುತ್ತಿವೆ. ಪ್ರತಿಯೊಂದು ನೇಮಕಾತಿ ಹಗರಣದ ಬಗ್ಗೆ ತನಿಖೆಯಾದರೂ ಇಲ್ಲಿಯವರೆಗೂ ಯಾರೊಬ್ಬರಿಗೂ ಶಿಕ್ಷೆಯಾಗಿಲ್ಲ ಬಹುತೇಕ ಭ್ರಷ್ಟರೇ ತುಂಬಿರುವುದು ಮತ್ತು ಭ್ರಷ್ಟರನ್ನು ಉತ್ಪಾದಿಸುವ ಲೋಕ ಸೇವಾ ಆಯೋಗದಿಂದ ರಾಜ್ಯದ ಜನತೆಗೆ ಆಗುತ್ತಿರುವ ಉಪಯೋಗವಾದರೂ ಏನು ಎಂದು ಪ್ರಶ್ನಿಸಿದರು.

ಇತ್ತೀಚೆಗೆ ಕೆ ಪಿ ಎಸ್ ಸಿ ಅಧ್ಯಕ್ಷರಾಗಿದ್ದ ಶಿವಶಂಕರಪ್ಪ ಸಾಹುಕಾರ್ ತನ್ನ ಸ್ವಂತ ಮಕ್ಕಳಿಗೆ ಸರ್ಕಾರಿ ಹುದ್ದೆ ಗಿಟ್ಟಿಸಿಕೊಳ್ಳಲು ಅಕ್ರಮ ವ್ಯಸಗಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಸಿಕ್ಕಿಹಾಕಿಕೊಂಡ ನಂತರ ಅಧ್ಯಕ್ಷ ಸ್ಥಾನದಿಂದ ವಜಾಗೊಂಡಿದ್ದಾರೆ ಹಾಗೆಯೇ ಪಶು ವೈದ್ಯ ಇಲಾಖೆಯ ನೇಮಕಾತಿಗೆ ಸಂಬಂಧಿಸಿದಂತೆ ಹತ್ತಾರು ಲಕ್ಷ ಬೇಡಿಕೆ ಇಟ್ಟಿರುವುದು ಬಹಿರಂಗ ಕೊಟ್ಟಿದೆ ಇದೇ ರೀತಿ 2011 ರ ನೇಮಕಾತಿಯಲ್ಲಿಯೂ ಸಂಪೂರ್ಣವಾಗಿ ಭ್ರಷ್ಟಾಚಾರ ನಡೆದಿರುವುದು ಸಿಐಡಿ ತನಿಕೆಯಿಂದ ತಿಳಿದುಬಂದಿತ್ತು ಆದರೆ ಅಕ್ರಮ ಎಸಗಿದವರಿಗೇ ಉದ್ಯೋಗ ನೀಡಲಾಗಿದೆ ಇಂದಿನ ಅಧ್ಯಕ್ಷರು ನೇಮಕಾತಿ ಅಕ್ರಮಗಳಿಗಾಗಿ ಬಂದಿಸಲ್ಪಟ್ಟಿದ್ದರು ಅಕ್ರಮಗಳು ನಿರಂತರವಾಗಿ ನಡೆಯುತ್ತಿದ್ದರು ಕೂಡ ಇದನ್ನು ಸರಿಪಡಿಸುವ ಯಾವ ಪ್ರಯತ್ನವನ್ನು ಸರ್ಕಾರಗಳು ಮಾಡುತ್ತಿಲ್ಲ ಕೇವಲ ಕಣ್ಣೊರಿಸುವ ತಂತ್ರವಾಗಿ ಅಕ್ರಮಗಳು ಹೊರಬರದಂತಹ ಸಂದರ್ಭದಲ್ಲಿ ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

# 29 ಮಂದಿಗೆ ಶೀಘ್ರವೇ ಸಿಐಡಿ ನೋಟಿಸ್

ನಿರ್ಧರಿಸಲಾಗಿದೆ.

ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಮಂಜುನಾಥ್ ಅವರು, ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿಯಲ್ಲಿ ದೊಡ್ಡ ಮಟ್ಟದ ಅವ್ಯವಹಾರ ಹಾಗೂ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿದ್ದರು. ಈ ಸಂಬಂಧ ಕೆಪಿಎಸ್‌ಸಿ ಅಧ್ಯಕ್ಷರು, ಸದಸ್ಯರು ಹಾಗೂ ಅಕ್ರಮವಾಗಿ ಹುದ್ದೆ ಗಿಟ್ಟಿಸಿಕೊಂಡಿರುವ 29 ಅಭ್ಯರ್ಥಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ವಿಧಾನಸೌಧ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಈ ಎಫ್‌ಐಆರ್ ಆಧರಿಸಿ ತನಿಖೆ ಕೈಗೆತ್ತಿಕೊಂಡಿರುವ ಸಿಐಡಿ ಅಧಿಕಾರಿಗಳು, ಮೇಲಟ್ಟದ ಪ್ರಭಾವಿಗಳು ಹಾಗೂ ಅಕ್ರಮದಲ್ಲಿ ಭಾಗಿಯಾದವರ ಪಾತ್ರದ ಬಗ್ಗೆ ತನಿಖೆಯನ್ನು ಚುರುಕುಗೊಳಿಸಿದ್ದು, ಮುಂಬರುವ ದಿನಗಳಲ್ಲಿ ಮತ್ತಷ್ಟು ಸ್ಫೋಟಕ ಮಾಹಿತಿ ಹೊರಬರುವ ನಿರೀಕ್ಷೆಯಿದೆ.

# ಪ್ರತಿಭಟನಾಕಾರರ ವಿರುದ್ಧ ಅತಿಯಾದ ಬಲಪ್ರಯೋಗ ಬೇಡ: ಪೊಲೀಸರಿಗೆ ಸುಪ್ರೀಂ ಕೋರ್ಟ್ ಪಾಠ

"ಅವರಿಗೆ ಮಾರ್ಗದರ್ಶನ ಮತ್ತು ಸಮಾಲೋಚನೆ ಅಗತ್ಯ. ಪ್ರಬಲವಾದ ರಾಜ್ಯದಿಂದ ಆಕ್ರಮಣಕಾರಿ ಕ್ರಮಗಳು ನಡೆದರೆ ಪರಿಸ್ಥಿತಿ ಮತ್ತಷ್ಟು ಉಲ್ಬಣಗೊಂಡು ಹಿಂಸಾಚಾರ ಹೆಚ್ಚಾಗಬಹುದು. ಅದನ್ನು ತಪ್ಪಿಸಬೇಕು" ಎಂದು ಮುಖ್ಯ ನ್ಯಾಯಮೂರ್ತಿಗಳು ಹೇಳಿದರು. ಮದರಸಾಗಳಲ್ಲಿ 'ವಂದೇ ಮಾತರಂ' ಹಾಡಿದರೆ ಆಕಾಶ ಕಳಚಿ ಬೀಳುವುದಿಲ್ಲ: ಕೋಲ್ಕತ್ತಾ ಹೈಕೋರ್ಟ್ ಪೊಲೀಸರು ಸಂಯಮದಿಂದ ವರ್ತಿಸಬೇಕು ಹಿಂಸಾಚಾರದಲ್ಲಿ ಭಾಗಿಯಾದವರು ಯಾವುದೇ ಕಾರಣಕ್ಕೂ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳಬಾರದು ಎಂದು ಅರ್ಜಿದಾರರ ಪರ ವಕೀಲರು ವಾದಿಸಿದರು. ಸಂಸತ್ತು ಪ್ರಜಾಪ್ರಭುತ್ವದ ದೇವಾಲಯವಾಗಿದ್ದು, ಪ್ರತಿಭಟನಾಕಾರರು ಸಂಸತ್ ಸಂಕೀರ್ಣ ಪ್ರವೇಶಿಸಲು ಯತ್ನಿಸಿದ್ದರೆ ಅದರ ಭದ್ರತಾ ಪರಿಣಾಮಗಳನ್ನು ಗಂಭೀರವಾಗಿ ಪರಿಗಣಿಸಬೇಕು ಎಂದರು.

"ಅವರು ಗುಂಡು ಹಾರಿಸಿದ್ದರೆ ಏನಾಗುತ್ತಿತ್ತು? ಅವರು ಪ್ರಜಾಪ್ರಭುತ್ವದ ದೇವಾಲಯದತ್ತ ಸಾಗುತ್ತಿದ್ದರು. ಪ್ರತಿಯೊಬ್ಬರೂ ತಮ್ಮ ಕೃತ್ಯಕ್ಕೆ ಹೊಣೆಗಾರರಾಗಬೇಕು," ಎಂದು ಅವರು ಹೇಳಿದರು. ಆದರೆ, ಹಿಂಸಾಚಾರ ನಡೆದರೂ ಪೊಲೀಸರು ಅತ್ಯಂತ ಸಂಯಮದಿಂದ ಪರಿಸ್ಥಿತಿಯನ್ನು ನಿಭಾಯಿಸಬೇಕು ಮತ್ತು ಶಾಂತಿಯುತ ಪ್ರತಿಭಟನೆಗೆ ಅವಕಾಶ ಕಲ್ಪಿಸುವುದೇ ಆದ್ಯತೆ ಎಂದು ನ್ಯಾಯಪೀಠ ಪುನರುಚ್ಚರಿಸಿತು.

"ಮುಖ್ಯವಾದುದು ಶಾಂತಿಯುತ ಮೆರವಣಿಗೆಗೆ ಅವಕಾಶ ನೀಡುವುದು. ಯಾವುದೇ ಘಟನೆ ನಡೆದರೂ ಪರಿಸ್ಥಿತಿ ನಿಯಂತ್ರಣ ತಪ್ಪದಂತೆ ಪೊಲೀಸರು ಅತ್ಯಂತ ಸಂಯಮದಿಂದ ವರ್ತಿಸಬೇಕು. ಇಂತಹ ಘಟನೆಗಳನ್ನು ಅತ್ಯಂತ ಎಚ್ಚರಿಕೆಯಿಂದ ನಿಭಾಯಿಸಬೇಕು," ಎಂದು ಮುಖ್ಯ ನ್ಯಾಯಮೂರ್ತಿಗಳು ಹೇಳಿದರು. ಪ್ರತಿಭಟನಾಕಾರರ ಮಾತುಗಳನ್ನು ಆಲಿಸುವುದೇ ಹಿಂಸಾಚಾರ ತಡೆಯುವ ಅತ್ಯಂತ ಪರಿಣಾಮಕಾರಿ ಮಾರ್ಗ ಎಂದು ಅವರು ಅಭಿಪ್ರಾಯಪಟ್ಟರು. "ಈ ಯುವಕರು ಹಿಂಸೆಗೆ ಇಳಿಯದಂತೆ ನಾವು ಎಚ್ಚರಿಕೆಯಿಂದ ಹೆಜ್ಜೆ ಇಡಬೇಕು. ಅವರಿಗೆ ಸಲಹೆ ನೀಡಿ, ಸಮಾಧಾನಪಡಿಸುವುದೇ ಉತ್ತಮ ಮಾರ್ಗ. ಅತ್ಯಂತ ಶಕ್ತಿಶಾಲಿ ಸಾಧನವೆಂದರೆ ಆಲಿಸುವುದು. ಅವರು ಏಕೆ ಕೂಗುತ್ತಿದ್ದಾರೆ ಎಂಬುದನ್ನು ಮೊದಲು ಕೇಳಿ, ಅರ್ಥಮಾಡಿಕೊಳ್ಳಿ," ಎಂದು ಮುಖ್ಯ ನ್ಯಾಯಮೂರ್ತಿಗಳು ಹೇಳಿದರು. ಇಂತಹ ಪರಿಸ್ಥಿತಿಗಳನ್ನು ಹೇಗೆ ನಿಭಾಯಿಸಬೇಕು ಎಂಬುದನ್ನು ನಿರ್ಧರಿಸಲು ಕಾನೂನು ಜಾರಿ ಸಂಸ್ಥೆಗಳೇ ಸೂಕ್ತವಾಗಿವೆ ಎಂದೂ ಅವರು ಹೇಳಿದರು. ಪೊಲೀಸ್ ಹಾಗೂ ಭದ್ರತಾ ಸಿಬ್ಬಂದಿಯ ವಿರುದ್ಧ ಅವಹೇಳನಕಾರಿ ಭಾಷೆ ಬಳಸಿದವರನ್ನು ಗುರುತಿಸಿ, ಅವರಿಗೆ ಸಮುದಾಯ ಸೇವೆ ಕಡ್ಡಾಯಗೊಳಿಸುವಂತೆ ಅರ್ಜಿಯಲ್ಲಿ ಕೋರಲಾಗಿದೆ.

# ಲೋಕಸಭೆಯಲ್ಲಿ "ಬ್ಯಾಂಕರ್ ಬುಕ್ಸ್ ಎವಿಡೆನ್ಸ್ ಬಿಲ್"

ಸೀತಾರಾಮನ್ ಚರ್ಚೆ ಮತ್ತು ಅಂಗೀಕಾರಕ್ಕಾಗಿ 'ಬ್ಯಾಂಕರ್ ಬುಕ್ಸ್ ಎವಿಡೆನ್ಸ್ ಬಿಲ್, 2026' ಅನ್ನು ಮಂಡಿಸಿದರು. ಆದಾಗ್ಯೂ, ಮಸೂದೆಯ ಮೇಲಿನ ಚರ್ಚೆಯಲ್ಲಿ ಭಾಗವಹಿಸುವ ಬದಲು, ವಿರೋಧ ಪಕ್ಷದ ಸಂಸದರು ತಮ್ಮ ಘೋಷಣೆಗಳನ್ನು ತೀವ್ರಗೊಳಿಸಿ, ಸರ್ಕಾರ ವಿರೋಧಿ ಫಲಕಗಳನ್ನು ಪ್ರದರ್ಶಿಸಿದರು. ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮತ್ತು ಸ್ಪೀಕರ್ ಜಗದಾಂಬಿಕಾ ಪಾಲ್ ವಿರೋಧ ಪಕ್ಷದ ಸದಸ್ಯರನ್ನು ಶಾಂತವಾಗಿರಲು ಮತ್ತು ಶಾಸಕಾಂಗ ಪ್ರಕ್ರಿಯೆಯಲ್ಲಿ ಭಾಗವಹಿಸಲು ಪದೇ ಪದೇ ಒತ್ತಾಯಿಸಿದರು. ಆದಾಗ್ಯೂ, ಗದ್ದಲ ಕಡಿಮೆಯಾಗದಿದ್ದಾಗ, ಪೀಠವು ಮಸೂದೆಯನ್ನು ಅಂಗೀಕರಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಿತು. ಇದನ್ನು ಚರ್ಚೆಯಿಲ್ಲದೆ ಧ್ವನಿ ಮತದ ಮೂಲಕ ಅಂಗೀಕರಿಸಲಾಯಿತು. ನಂತರ, ಆಗಸ್ಟ್ 6ರ ಗುರುವಾರ ಬೆಳಿಗ್ಗೆ 11 ಗಂಟೆಗೆ ಸದನವನ್ನು ಮುಂದೂಡಲಾಯಿತು. ಬ್ಯಾಂಕರ್ಸ್ ಪುಸ್ತಕಗಳು ಮತ್ತು ಸಾಕ್ಷ್ಯಾಧಾರ ಮಸೂದೆ, 2026ರ ಪ್ರಾಥಮಿಕ ಉದ್ದೇಶವು ಬ್ಯಾಂಕ್ ಖಾತೆಗಳ ಪುಸ್ತಕಗಳು ಮತ್ತು ಡಿಜಿಟಲ್/ಎಲೆಕ್ಟ್ರಾನಿಕ್ ಪುರಾವೆಗಳನ್ನು ನ್ಯಾಯಾಲಯದಲ್ಲಿ ಪುರಾವೆಯಾಗಿ ಪ್ರಸ್ತುತಪಡಿಸುವ ನಿಯಮಗಳನ್ನು ಆಧುನೀಕರಿಸುವುದು ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸದನದಲ್ಲಿ ಹೇಳಿದ್ದಾರೆ. ಇದರ ಜಾರಿಗೆ ಗಕಖ ಮತ್ತು ಡಿಜಿಟಲ್ ಬ್ಯಾಂಕಿಂಗ್ ಯುಗದಲ್ಲಿ ಆರ್ಥಿಕ ಅಪರಾಧಗಳ ತ್ವರಿತ ತನಿಖೆಗೆ ಅನುಕೂಲವಾಗುತ್ತದೆ ಮತ್ತು ಕಾನೂನು ಪ್ರಕ್ರಿಯೆಗಳನ್ನು ಸುಗಮಗೊಳಿಸುತ್ತದೆ.

# ಅರ್ಹ ಮತದಾರರು ಮತದಾರರ ಪಟ್ಟಿಯಿಂದ ವಂಚಿತರಾಗಬಾರದು : ಸಿಇಒ ಗಿತ್ತೆ ಮಾಧವ ವಿಠ್ಠಲರಾವ್

ತಲುಪಿಸಬೇಕು. ಜಿಲ್ಲೆಯಲ್ಲಿ ಈಗಾಗಲೇ ಶೇ. 87% ರಷ್ಟು ಗಣಕೀಕರಣ ನಮೂನೆಗಳ ಡಿಜಿಟಲೀಕರಣ ಕಾರ್ಯ ಪೂರ್ಣಗೊಂಡಿದ್ದು, ರಾಜ್ಯದಲ್ಲೇ ಮುಂಚೂಣಿಯಲ್ಲಿದೆ ಎಂದರು. ಅಗಸ್ಟ್ 8 ರೊಳಗೆ ಪ್ರಕ್ರಿಯೆ ಪೂರ್ಣಗೊಳ್ಳಲಿದ್ದು, 6 ಮತ್ತು 7ನೇ ತಾರೀಖಿನವರೆಗೆ ಕಾಯದೆ ತಕ್ಷಣ ಕ್ರಮ ಕೈಗೊಳ್ಳಿ. ಡಿಜಿಟಲೀಕರಣಗೊಳ್ಳದಿದ್ದಲ್ಲಿ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗುವುದಿಲ್ಲ.ಬಿ.ಎಲ್.ಓ ಬಗ್ಗೆ ಮಾಹಿತಿ ಇಲ್ಲದಿದ್ದಲ್ಲಿ, ನಿಮ್ಮ ಹತ್ತಿರದ ಪೋಲಿಂಗ್ ಬೂತ್‌ಗೆ (ಮತಗಟ್ಟೆ) ಭೇಟಿ ನೀಡಿ. ಅಲ್ಲಿ ಪ್ರದರ್ಶಿಸಲಾದ ಬಿ.ಎಲ್.ಓ ಅವರ ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಿ ಫಾರ್ಮ್ ಸಲ್ಲಿಸಬಹುದು ಎಂದು ತಿಳಿಸಿದರು.

ಯಾವುದೇ ಒಬ್ಬ ಅರ್ಹ/ನೈಜ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು ಎಂಬುದೇ ನಮ್ಮ ಮುಖ್ಯ ಉದ್ದೇಶ. ಹೀಗಾಗಿ ಸಾರ್ವಜನಿಕರು ತಕ್ಷಣ ಸ್ಪಂದಿಸಿ ಸಹಕರಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ರೇಷ್ಮಾ ಕೌಸರ್, ಬಿಸಿಎಂ ಅಧಿಕಾರಿ ರೇಣುಕಮ್ಮ ಡಿಡಿಪಿಯು ಪಳನಿಸ್ವಾಮಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಸಿದ್ದಲಿಂಗೇಶ್ ಜಿಲ್ಲಾ ಆಯುಷ್ ಅಧಿಕಾರಿ ಡಾ.ಯೊಗೇಂದ್ರ ಕುಮಾರ್, ಆರೋಗ್ಯ ಇಲಾಖೆಯ ಡಾ. ಮಂಜುನಾಥ ಪಾಟೀಲ್ ಕಾಲೇಜು ವಿದ್ಯಾರ್ಥಿಗಳು ಜಾಥಾದಲ್ಲಿ ಭಾಗವಹಿಸಿದ್ದರು.

# ವೈದ್ಯರು ಭಗವಾನ್ ನಾರಾಯಣ ಸ್ವರೂಪ



ಕಂಪ್ಲಿ: ವೈದ್ಯರು ವೈಜ್ಞಾನಿಕ ಜ್ಞಾನವುಳ್ಳವರಾದರೂ ಧಾರ್ಮಿಕ ಮನೋಭಾವ ಹೊಂದಿದ್ದಲ್ಲಿ ವೃತ್ತಿಗೆ ಇನ್ನಷ್ಟು ಕಳೆ ಮೂಡಬಲ್ಲದು. ಪ್ರಾಣ ರಕ್ಷಿಸುವ ವೈದ್ಯರನ್ನು ಭಗವಾನ್ ನಾರಾಯಣಗೆ ಹೋಲಿಸಲಾಗುತ್ತದೆ. ಇವರಲ್ಲಿನ ದೈವ ಭಕ್ತಿ ಅವರನ್ನು ಮತ್ತಷ್ಟು ಎತ್ತರಕ್ಕೆ ತೆಗೆದುಕೊಂಡು ಹೋಗುತ್ತದೆ ಎಂದು ಹಂಪಿ ಸಾವಿರದೇವರಮಠದ ಶ್ರೀ ವಾಮದೇವ ಶಿವಾಚಾರ್ಯರು ಹೇಳಿದರು.

ಎಮ್ಮಿಗನೂರಿನ ಶ್ರೀ ಹಂಪಿ ಸಾವಿರದೇವರ ಮಠದಲ್ಲಿ ನಡೆದ ಶಿಶುನಾಳ ಶರೀಫರ ಪುರಾಣ ಪ್ರವಚನದಲ್ಲಿ ಗುರುವಾರ ಬಳ್ಳಾರಿ ವೈದ್ಯರುನ್ನು ಗೌರವಿಸಿ ಮಾತನಾಡಿದರು. ವೀರಶೈವ ವಿದ್ಯಾವರ್ಧಕ ಸಂಘದ ಮಾಜಿ ಅಧ್ಯಕ್ಷ, ಹಿರಿಯ ನ್ಯಾಯವಾದಿ ಉಡೇದ ಬಸವರಾಜ್, ವೈದ್ಯರಾದ ಡಾ. ಮಂಜುನಾಥ್, ಸುಂದರೇಶ್, ಸೋಮನಾಥ್, ಸದಾಶಿವಗೌಡ, ಜೀವಿರಾವ್‌ರನ್ನು ಗೌರವಿಸಲಾಯಿತು. ನಾನಾ ಮಠಾಧೀಶರು, ವೀರಶೈವ ಸಮಾಜದ ಮುಖಂಡರಾದ ಪ್ಯಾಟ್ಯಾಳ್ ಬಸವರಾಜ, ಬಜಾರ್ ಬಸವರಾಜ, ಮಹೇಶ್ ಗೌಡ, ಸದಾಶಿವಗೌಡ ಇತರರಿದ್ದರು.

# ಮೀಸಲಿನಿಂದ ವಿದ್ಯಾರ್ಜನೆಗೆ ಅನುಕೂಲ




ಸಂಡೂರು: ಕ್ರೀಡೆಗಳಿಂದ ಮಾನಸಿಕ-ದೈಹಿಕ ಬೆಳವಣಿಗೆಗೆ ಅನುಲೂಕ ಎಂದು ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್ ಹೇಳಿದರು. ತೋರಣಗಲ್ ಬ್ಯಾಡ್ಮಿಂಟನ್ ಸ್ಪೋರ್ಟ್ಸ್ ಕ್ಲಬ್‌ನಂದ ಸರ್ಕಾರಿ ಪ್ರೌಢಶಾಲೆ ಒಳಾಂಗಣ ಕ್ರೀಡಾಂಗಣದಲ್ಲಿ ಶನಿವಾರ ಫ್ರೀಡಂ ಕಪ್-2026 ಸಂಡೂರು ವಿಭಾಗ ಮಟ್ಟದ ಮುಕ್ತ ಪುರುಷರ ಡಬಲ್ಸ್ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ಮಾತನಾಡಿದರು.

ದೇಸಿ ಕ್ರೀಡೆಗಳಲ್ಲೂ ಸರ್ಕಾರ ಮೀಸಲಾತಿ ಕಲ್ಪಿಸಿದ್ದು, ವಿದ್ಯಾರ್ಥಿಗಳಿಗೆ ಉದ್ಯೋಗ ಹಾಗೂ ವಿದ್ಯಾರ್ಜನೆಗೆ ಅನುಕೂಲ ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ. ಏಕಾಂಬರಪ್ಪ, ಗ್ರಾಪಂ ಮಾಜಿ ಅಧ್ಯಕ್ಷ ಎನ್. ಶಂಕರ, ಜೆಎಸ್‌ಡಬ್ಲ್ಯು ಫೌಂಡೇಷನ್‌ನ ಮಹ್ಮದ್ ರಫೀಕ್, ಗ್ರಾಪಂ ಮಾಜಿ ಸದಸ್ಯರಾದ ಹೇಮಚಂದ್ರಪ್ಪ, ಕೆ.ಮಂಜುನಾಥ್, ಎನ್. ಗಣೇಶ್ ಹಾಗೂ ಚೌದ್ರಿ ಹೋಟೆಲ್ ಮಾಲೀಕ ರಾಘವೇಂದ್ರ, ಪ್ರಮುಖರಾದ ಪ್ರಕಾಶ್, ಶಿವಕುಮಾರ್, ಸುರೇಶ್, ಯು. ಶಿವು, ಶ್ರೀಕಾಂತ್, ವಿಜಯ, ಬಸವ, ಎನ್. ಮಂಜು, ರಘು, ಶ್ರೀನಿವಾಸ, ಗಂಗಾಧರ ಇತರರಿದ್ದರು.

ಪಂದ್ಯಾವಳಿಯಲ್ಲಿ ತೋರಣಗಲ್‌ನ ಶಿವರುದ್ರ ಮತ್ತು ವಿಜಯಕುಮಾರ್ ಪ್ರಥಮ, ಜೆಎಸ್‌ಡಬ್ಲುಟಿ ಜನ ಅಬ್ಬಾಸ್ ಮತ್ತು ಅಮೋಘ್ ದ್ವಿತೀಯ, ಎನ್‌ಎಂಡಿಸಿಯ ಕೆ.ಉಮೇಶ್ ಮತ್ತು ಶಫೀಪಾಷಾ ತೃತೀಯ ಬಹುಮಾನ ಹಾಗೂ ಸಂಡೂರಿನ ಅಫ್ಜಲ್ ಮತ್ತು ಗಣೇಶ್ 4ನೇ ಸ್ಥಾನ ಪಡೆದರು.

ವೈಯಕ್ತಿಕ ಪ್ರಶಸ್ತಿಗಳಲ್ಲಿ ತೋರಣಗಲ್‌ನ ಶ್ರೀಕಾಂತ್ ಬೆಸ್ಟ್ ಸ್ಮ್ಯಾಷರ್, ಸಂಡೂರಿನ ಅಫ್ಜಲ್ ಬೆಸ್ಟ್ ಡಿಫೆಂಡರ್ ಹಾಗೂ ತೋರಣಗಲ್‌ನ ವಿಜಯಕುಮಾರ್ ಬೆಸ್ಟ್ ಪ್ಲೇಯರ್ ಪ್ರಶಸ್ತಿ ಪಡೆದರು

# ಕಾಂಗ್ರೆಸ್ ಪಕ್ಷಕ್ಕೆ ಸಂಘಟನೆಯೇ ಶಕ್ತಿ



ಕೂಡ್ಲಿಗಿ: ಬಲಿಷ್ಠ ಸಂಘಟನೆಯೇ ಕಾಂಗ್ರೆಸ್ ಪಕ್ಷದ ಅತಿದೊಡ್ಡ ಶಕ್ತಿ ಎಂದು ಜಿಲ್ಲಾ ಉಸ್ತುವಾರಿ ಹಾಗೂ ತೆಲಂಗಾಣ ರಾಜ್ಯದ ಸಲಹೆಗಾರ ಹರಕರ್ ವೇಣುಗೋಪಾಲ ರಾವ್ ಹೇಳಿದರು.

ಅನುಬಂಧ ಕಲ್ಯಾಣ ಮಂಟಪದಲ್ಲಿ ಇತ್ತೀಚೆಗೆ ಎಐಸಿಸಿ ನೇತೃತ್ವದಲ್ಲಿ ನಡೆದ ಸಂಘಟನ ಸೃಜನ ಅಭಿಯಾನ ಅಂಗವಾಗಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡರ ಅಭಿಪ್ರಾಯ ಸಂಗ್ರಹಿಸುವ ಮಹತ್ವದ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆಯಲ್ಲಿ ಹಿರಿಯ ಮುಖಂಡರ ಅಭಿಪ್ರಾಯಕ್ಕೆ ಎಐಸಿಸಿ ಮಹತ್ವ ನೀಡುತ್ತಿರುವುದು ಪಕ್ಷದ ಆಂತರಿಕ ಪ್ರಜಾಪ್ರಭುತ್ವ ಹಾಗೂ ಸಂಘಟನಾ ಬದ್ಧತೆಗೆ ಸಾಕ್ಷಿಯಾಗಿದೆ.

ಸಂಘಟನೆ ಇನ್ನಷ್ಟು ಸದೃಢಗೊಳ್ಳಬೇಕಾದರೆ ಅನುಭವ, ಸಾಮರ್ಥ್ಯ ಹಾಗೂ ಪಕ್ಷದ ಸಿದ್ಧಾಂತಗಳಿಗೆ ಬದ್ಧತೆಯಿರುವ ನಾಯಕತ್ವದ ಅವಶ್ಯಕತೆ ಇದೆ. ಗ್ರಾಮ ಮಟ್ಟದಿಂದ ಜಿಲ್ಲಾ ಮಟ್ಟದವರೆಗೆ ಕಾರ್ಯಕರ್ತರನ್ನು ಬಲಪಡಿಸುವ ಗುರಿಯನ್ನು ಸಂಘಟನ ಸೃಜನ ಅಭಿಯಾನ ಹೊಂದಿದೆ ಎಂದು ತಿಳಿಸಿದರು.

ಜಿಲ್ಲೆ ಹಾಗೂ ತಾಲೂಕು ಮಟ್ಟದ ಪದಾಧಿಕಾರಿಗಳು ಅಮೂಲ್ಯ ಅಭಿಪ್ರಾಯಗಳನ್ನು ಸಮಿತಿ ಮುಂದೆ ಮಂಡಿಸಿ, ಸಂಘಟನೆಯನ್ನು ಇನ್ನಷ್ಟು ಬಲಗೊಳಿಸುವ ಕುರಿತು ಸಮಾಲೋಚನೆ ನಡೆಸಿದರು.

ಕೆಪಿಸಿಸಿ ಪದಾಧಿಕಾರಿಗಳಾದ ಮರಿಯೋಜಿರಾವ್, ಆರತಿ ಚಂದ್ರಶೇಖರ, ಕೆಪಿಸಿಸಿ ಕಾರ್ಯದರ್ಶಿ ಹಾಗೂ ಶಾಸಕ ಸುಭಾಷ್ ರಾಥೋಡ್, ಕಾಂಗ್ರೆಸ್ ಪಕ್ಷದ ವಿಜಯನಗರ ಜಿಲ್ಲಾಧ್ಯಕ್ಷ ಹಾಗೂ ಮಾಜಿ ಶಾಸಕ ಸಿರಾಜ್ ಶೇಖ್, ಶಾಸಕ ಡಾ.ಎನ್.ಟಿ. ಶ್ರೀನಿವಾಸ ಮಾತನಾಡಿದರು.

ಕೂಡ್ಲಿಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ. ಗುರುಸಿದ್ಧನಗೌಡ, ಹೊಸಹಳ್ಳಿ ಬ್ಲಾಕ್ ಅಧ್ಯಕ್ಷ ಕೆ.ಜಿ. ಕುಮಾರಗೌಡ, ಕಾವಲಿ ಶಿವಪ್ಪನಾಯಕ, ಗ್ಯಾರಂಟಿ ಅನುಷ್ಠಾನದ ತಾಲೂಕು ಅಧ್ಯಕ್ಷ ಜಿಲಾನ್, ಎರಿಸ್ವಾಮಿ ಹಾಗೂ ಕಾರ್ಯಕರ್ತರಿದ್ದರು.

# ಕೇಂದ್ರ & ಮೆಟಾ-ಎಚ್ಚರಿಕೆ ಬೆನ್ನಲ್ಲೇ ಕ್ಷಮೆ ಕೋರಿದ ಜುಕರ್‌ಬರ್ಗ್

ನವದೆಹಲಿ: ಮೆಟಾ ಸಿಇಒ ಮಾರ್ಕ್ ಜುಕರ್‌ಬರ್ಗ್ ಅವರು ತಮ್ಮ ಪ್ಲಾಟ್‌ಫಾರ್ಮ್‌ನಲ್ಲಿ ಪ್ರಸಾರವಾದ ಸಿಎಸ್‌ಎಎಮ್ ವಿಷಯ, ಡಿಪ್‌ಫೇಕ್ ವಿಷಯಗಳು ಹಾಗೂ ಪ್ಲಾಟ್‌ಫಾರ್ಮ್ ನಿರ್ವಹಣೆಯಲ್ಲಿನ ಲೋಪದೋಷಗಳಿಗಾಗಿ ಕ್ಷಮೆಯಾಚಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಫೇಸ್‌ಬುಕ್ ವೀಡಿಯೊವನ್ನು ತಾತ್ಕಾಲಿಕವಾಗಿ ತೆಗೆದುಹಾಕಿದ್ದಕ್ಕಾಗಿ ಮೆಟಾ ಸಿಇಒ ಮಾರ್ಕ್ ಜುಕರ್‌ಬರ್ಗ್ ಅವರು 3 ದಿನಗಳ ಒಳಗೆ ಬೇಷರತ್ ಕ್ಷಮೆಯಾಚಿಸಬೇಕು, ಇಲ್ಲದಿದ್ದರೆ ಭಾರತದಲ್ಲಿ ಕಂಪನಿಯು ಪಡೆಯುತ್ತಿರುವ 'ಸೇಫ್ ಹಾರ್ಬರ್' ರಕ್ಷಣೆಯನ್ನು ಹಿಂಪಡೆಯಲಾಗುವುದು ಎಂದು ಸಂಸದೀಯ ಸಮಿತಿ ಎಚ್ಚರಿಕೆ ನೀಡಿತ್ತು. ಈ ಎಚ್ಚರಿಕೆಯ ಬೆನ್ನಲ್ಲೇ ನಿರ್ದಿಷ್ಟ ರೀತಿಯ ವಿಷಯಗಳನ್ನು ಬೂಸ್ಟ್ ಮಾಡಲು ಹೆಚ್ಚಿನ ಹಣ ಪಾವತಿಸಲಾಗಿದೆ ಎಂಬುದನ್ನು ಜುಕರ್‌ಬರ್ಗ್ ಒಪ್ಪಿಕೊಂಡಿದ್ದಾರೆ ಹಾಗೂ ಈ ತಪ್ಪಿಗಾಗಿ ವಿಷಾದ ವ್ಯಕ್ತಪಡಿಸಿ ಕ್ಷಮೆ ಕೋರಿದ್ದಾರೆ.

ಸಂಸದೀಯ ತಂತ್ರಜ್ಞಾನ ಸಮಿತಿಯ ಅಧ್ಯಕ್ಷ ನಿಶಿಕಾಂತ್ ದುಬೆ ಅವರು ಮಾತನಾಡಿ, ಕೇವಲ ಕ್ಷಮೆಯಾಚನೆ ಮಾತ್ರ ಸಾಕಾಗುವುದಿಲ್ಲ, ಈ ಲೋಪಕ್ಕೆ ಕಾರಣರಾದವರ ಮೇಲೆ ಜವಾಬ್ದಾರಿ ನಿಗದಿಪಡಿಸಬೇಕು" ಎಂದು ಸ್ಪಷ್ಟಪಡಿಸಿದ್ದಾರೆ. ಜುಕರ್‌ಬರ್ಗ್ ಅವರು ವೈಯಕ್ತಿಕವಾಗಿ ಕ್ಷಮೆಯಾಚಿಸದಿದ್ದರೆ, ಮಾಹಿತಿ ತಂತ್ರಜ್ಞಾನ ಕಾಯಿದೆಯ ಸೆಕ್ಷನ್ 79ರ ಅಡಿಯಲ್ಲಿ ಮೆಟಾ ಪಡೆಯುತ್ತಿರುವ 'ಸೇಫ್ ಹಾರ್ಬರ್' ರಕ್ಷಣೆಯನ್ನು ಹಿಂಪಡೆಯಲು ಶಿಫಾರಸು ಮಾಡಲಾಗುವುದು ಎಂದು ತಿಳಿಸಿದ್ದರು.

ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಕುರಿತು ದೇಶಾದ್ಯಂತ ನಡೆಯುತ್ತಿದ್ದ ಪ್ರತಿಭಟನೆಗಳನ್ನು ಉದ್ದೇಶಿಸಿ ಪ್ರಧಾನಿ ಮೋದಿ ಅವರು ಮಾತನಾಡಿದ್ದ ಹಾಗೂ ಪರೀಕ್ಷಾ ಅಕ್ರಮಗಳ ವಿರುದ್ಧ ಕಠಿಣ ಕ್ರಮದ ಭರವಸೆ ನೀಡಿ-ದ್ದ ವೀಡಿಯೊ ಫೇಸ್‌ಬುಕ್‌ನಲ್ಲಿ ಸುಮಾರು 5 ಗಂಟೆಗಳ ಕಾಲ ಲಭ್ಯ ಇರಲಿಲ್ಲ. ತಾಂತ್ರಿಕ ದೋಷದಿಂದ ವೀಡಿಯೊ ಡಿಲೀಟ್ ಆಗಿ-ತ್ತು ಮತ್ತು ನಂತರ ವಿಡಿಯೋವನ್ನು ಮರುಸ್ಥಾಪಿಸಲಾಗಿದೆ ಎಂದು ಮೆಟಾ ಸ್ಪಷ್ಟನೆ ನೀಡಿ ವಿಷಾದ ವ್ಯಕ್ತಪಡಿಸಿತ್ತು. ಆದರೆ ಭಾರತದ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಹಾಗೂ ಸಂಸದೀಯ ಸಮಿತಿಯ ಸದಸ್ಯರು ಈ ಸಮಜಾಯಿಷಿಯನ್ನು ಒಪ್ಪಿಕೊಳ್ಳಲು ನಿರಾಕರಿಸಿದ್ದರು.

ಸಭೆಯಲ್ಲಿ ಸಂಸದೀಯ ಸಮಿತಿಯು ಮೆಟಾ ಪ್ರತಿನಿಧಿಗಳನ್ನು ತೀವ್ರ ವಿಚಾರಣೆಗೆ ಒಳಪಡಿಸಿತ್ತು. ಪ್ರಧಾನಿಯವರ ವೀಡಿಯೊ ತೆಗೆದುಹಾಕಲು ಯಾರು ಅನುಮತಿ ನೀಡಿದ್ದರು? ಇತರ ಆಕ್ಷೇಪಾರ್ಹ ವಿಷಯಗಳು ಪ್ಲಾಟ್‌ಫಾರ್ಮ್‌ನಲ್ಲಿ ಮುಕ್ತವಾಗಿ ಲಭ್ಯವಿರುವಾಗ, ಪ್ರಧಾನಿಯವರ ಅಧಿಕೃತ




ವೀಡಿಯೊವನ್ನು ಮಾತ್ರ ಏಕೆ ತೆಗೆದುಹಾಕಿದ್ದು ಯಾಕೆ? ದೇಶದ ಪ್ರಧಾನ ಮಂತ್ರಿಯವರ ಪೋಸ್ಟ್‌ಗೇ ಈ ಗತಿ ಬಂದಿರುವಾಗ, ಸಾಮಾನ್ಯ ಬಳಕೆದಾರರ ಪೋಸ್ಟ್‌ಗಳಿಗೆ ಯಾವ ಸುರಕ್ಷತೆ ಇದೆ? ಮೆಟಾದ ಆಲ್ಗರಿದಮ್ ತಾರತಮ್ಯದಿಂದ ಕೂಡಿದೆಯೇ?

ಮೆಟಾ ಪ್ರತಿನಿಧಿಗಳು ಸಮಿತಿಯ ಮುಂದೆ ವಿಷಾದ ವ್ಯಕ್ತಪಡಿಸಿ ಕ್ಷಮೆಯಾಚಿಸಿದ್ದರೂ, ಸಂಸದರು ಮಾತ್ರ ಕಂಪನಿಯ ಆಡಳಿತ ಮಂಡಳಿಯ ಜವಾಬ್ದಾರಿಯನ್ನು ನಿಗದಿಪಡಿಸಿ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಪಟ್ಟು ಹಿಡಿದಿದ್ದರು,


ಜುಕರ್‌ಬರ್ಗ್ ಅವರಿಗೆ 3 ದಿನಗಳ ಕಾಲಾವಕಾಶ ನೀಡಲಾಗಿತ್ತು. ಒಂದು ವೇಳೆ 'ಸೇಫ್ ಹಾರ್ಬರ್' ರಕ್ಷಣೆ ರದ್ದಾದರೆ, ಫೇಸ್‌ಬುಕ್ ಹಾಗೂ ಇನ್‌ಸ್ಟಾಗ್ರಾಮ್‌ನಲ್ಲಿ ಬಳಕೆದಾರರು ಹಾಕುವ ಪ್ರತಿಯೊಂದು ಅಕ್ರಮ/ಆಕ್ಷೇಪಾರ್ಹ ಪೋಸ್ಟ್‌ಗೂ ಮೆಟಾ ಅಧಿಕಾರಿಗಳ ವಿರುದ್ಧವೇ ನೇರವಾಗಿ ಎಫ್‌ಐಆರ್ ಹಾಗೂ ಕಾನೂನು ಕ್ರಮ ಕೈಗೊಳ್ಳಬಹುದಾಗಿತ್ತು.

# ಹುಡುಗಿ ಕಾಟದಿಂದ ತಪ್ಪಿಸಿಕೊಳ್ಳೋಕೆ ರಾಯರ ಮೊರೆ ಮಠದ ಹುಂಡಿಯಲ್ಲಿ ವಿಚಿತ್ರ ಹರಕೆ ಪತ್ರ

ಬೆಳಗಾವಿ: ಹುಡುಗಿ ಕಾಟದಿಂದ ತಪ್ಪಿಸಿಕೊಳ್ಳಲು ಭಕ್ತರೊಬ್ಬರು ರಾಯರಿಗೆ ಮೊರೆ ಇಟ್ಟಿರುವ ವಿಚಿತ್ರ ಹರಕೆ ಘಟನೆ ಜಿಲ್ಲೆಯ ರಾಮದುರ್ಗ ಪಟ್ಟಣದ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಬೆಳಕಿಗೆ ಬಂದಿದೆ.

ಇತ್ತೀಚೆಗೆ ರಾಘವೇಂದ್ರ ಮಠದಲ್ಲಿ ಹುಂಡಿ ಎಣಿಕೆ ಮಾಡುವ ಸಂದರ್ಭದಲ್ಲಿ ಈ ವಿಚಿತ್ರ ಹರಕೆ ಪತ್ರ ಪತ್ತೆಯಾಗಿದೆ. ರಾಯರೇ ಆ ಹುಡುಗಿಯಿಂದ ನಮ್ಮನ್ನು ಕಾಪಾಡು ಎಂದು ಭಕ್ತನೋರ್ವ ಪತ್ರ ಬರೆದು ಹುಂಡಿಯಲ್ಲಿ ಹಾಕಿದ್ದಾರೆ.

ಆರಂಭದಲ್ಲಿ ಶ್ರೀ ಗಣಪತಿಯೇ ನಮಃ ಹಾಗೂ ಓಂ ಶ್ರೀ ರಾಘವೇಂದ್ರಾಯ ನಮಃ ಎಂದು ಬರೆಯಲಾಗಿದೆ. ಮುಂದುವರೆದು, ರಾಯರೇ ನಮ್ಮನ್ನು ಆ ವಿಷದಿಂದ ಕಾಪಾಡು, ರಾಯ-ರೇ ಆ ಹುಡುಗಿಯಿಂದ ನಮ್ಮನ್ನು ಕಾಪಾಡು, ರಾಯರೇ ಈ ಕಷ್ಟದಿಂದ ನಮ್ಮನ್ನು ಕಾಪಾಡು. ನಮ್ಮ ಜೊತೆ ರಾಯರಿದ್ದಾರೆ. ಹೀಗಾಗಿ ಅವರಲ್ಲಿ ನನ್ನ ಕಷ್ಟವನ್ನು ಕೇಳಿಕೊಳ್ಳುತ್ತಿದ್ದೇನೆ, ಗುರುಗಳೇ ಆದಿಶಕ್ತಿ ದೇವಿ, ತಂದೆ, ತಾಯಿ ಕಾಪಾಡು ಎಂದು ಕೇಳಿಕೊಂಡು ಕೊನೆಗೆ ಧನ್ಯವಾದಗಳು ಎಂದು ಬರೆಯಲಾಗಿದೆ.



ಈ ಪತ್ರ ಬರೆದಿರುವ ವ್ಯಕ್ತಿಯ ಹೆಸರು, ವಿಳಾಸ ಸೇರಿದಂತೆ ಯಾವುದೇ ಮಾಹಿತಿ ಪತ್ರದಲ್ಲಿ ಉಲ್ಲೇಖವಾಗಿಲ್ಲ. ಅನಾಮಧೇಯ ಭಕ್ತನ ಈ ಅಪರೂಪದ ಮನವಿ ಪತ್ರ ಮಠದ ಸಿಬ್ಬಂದಿ ಹಾಗೂ ಭಕ್ತರನ್ನು ಚಕಿತಗೊಳಿಸಿದೆ. ಅಷ್ಟೇ ಅಲ್ಲದೇ, ಇದು ಸಾಮಾಜಿಕ ಜಾಲತಾಣಗಳಲ್ಲೂ ತೀವ್ರ ಚರ್ಚೆಗೆ ಗ್ರಾಸವಾಗಿದೆ

# ಅಮರನಾಥ ಯಾತ್ರೆಗೆ ತಾತ್ಕಾಲಿಕ ಬ್ರೇಕ್

ಜಮು : ಅರ್ಟಿಕಲ್ 370ನೇ ವಿಧಿಯನ್ನು ರದ್ದುಗೊಳಿಸಿದ ಏಳನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಅಮರನಾಥ ಯಾತ್ರ ಸ್ಥಗಿತಗೊಳಿಸಲಾಗಿದೆ.ಜಮ್ಮು ಮತ್ತು ಕಾಶ್ಮೀರದಾದ್ಯಂತ ಭದ್ರತೆಯನ್ನು ಹೆಚ್ಚಿಸಿದ್ದರಿಂದ ಇಲ್ಲಿನ ಮೂಲ ಶಿಬಿರದಿಂದ ವಾರ್ಷಿಕ ಅಮರನಾಥ ಯಾತ್ರೆಯನ್ನು ಸ್ಥಗಿತಗೊಳಿಸಲಾಯಿತು. ಜಮ್ಮುವಿನ ಭಗವತಿ ನಗರ ಮೂಲ ಶಿಬಿರದಿಂದ ಅಮರನಾಥ ಯಾತ್ರೆಯನ್ನು ದಿನಕ್ಕೆ ಸ್ಥಗಿತಗೊಳಿಸಲು ಆಡಳಿತವು ಯಾವುದೇ ನಿರ್ದಿಷ್ಟ ಕಾರಣವನ್ನು ನೀಡದಿದ್ದರೂ, ಚಾಲ್ತಿಯಲ್ಲಿರುವ ಪರಿಸ್ಥಿತಿಯಿಂದಾಗಿ ಮುನ್ನೆಚ್ಚರಿಕೆ ಕ್ರಮವಾಗಿ ಈ ಕ್ರಮವನ್ನು ತೆಗೆದುಕೊಳ್ಳಲಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ



# ರಾಯಚೂರುಗೆ ಸಚಿವ ಸ್ಥಾನ ಸಿಗದ ಬೇಸರ;

## ನಿಗಮ ಅಧ್ಯಕ್ಷ ಸ್ಥಾನಕ್ಕೆ ಬಸನಗೌಡ ದದ್ದಲ್ ರಾಜೀನಾಮೆ

ರಾಯಚೂರು: ರಾಜ್ಯ ಸಚಿವ ಸಂಪುಟದಲ್ಲಿ ರಾಯಚೂರು ಜಿಲ್ಲೆಗೆ ಪ್ರಾತಿನಿಧ್ಯ ಸಿಗದ ಹಿನ್ನೆಲೆಯಲ್ಲಿ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನಕ್ಕೆ ಶಾಸಕ ಬಸನಗೌಡ ದದ್ದಲ್ ರಾಜೀನಾಮೆ ನೀಡಿದ್ದಾರೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ರಾಜೀನಾಮೆ ಪತ್ರ ಸಲ್ಲಿಸಿರುವ ಬಸನಗೌಡ ದದ್ದಲ್, ಹಿಂದುಳಿದ ಜಿಲ್ಲೆಗಳಾದ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಿಗೆ ಸಚಿವ ಸ್ಥಾನ ಸಿಗದಿರುವುದು ಬೇಸರ ತಂದಿದೆ ಎಂದು ಹೇಳಿದ್ದಾರೆ.



ನೀತಿ ಆಯೋಗ ಗುರುತಿಸಿರುವ ಮಹತ್ವಾಕಾಂಕ್ಷಿ ಜಿಲ್ಲೆಗಳ ಪಟ್ಟಿಯಲ್ಲಿ ರಾಯಚೂರು ಇದ್ದರೂ, ಸಚಿವ ಸಂಪುಟದಲ್ಲಿ ಜಿಲ್ಲೆಗೆ ಅವಕಾಶ ಸಿಗದಿರುವುದರಿಂದ ಈ ನಿರ್ಧಾರ ಕೈಗೊಂಡಿದ್ದೇನೆ ಎಂದು ಅವರು ತಿಳಿಸಿದ್ದಾರೆ.

ಸಚಿವ ಸಂಪುಟ ವಿಸ್ತರಣೆಯ ಬಳಿಕ ರಾಜ್ಯದ ಹಲವು ಭಾಗಗಳಲ್ಲಿ ಅಸಮಾಧಾನ ವ್ಯಕ್ತವಾಗುತ್ತಿರುವ ಬೆನ್ನಲ್ಲೇ, ಬಸನಗೌಡ ದದ್ದಲ್ ಅವರ ರಾಜೀನಾಮೆ ರಾಜಕೀಯ ವಲಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ.

# ಪುಷ್ಕರ್ ಕನಸಿನ 'ವಿಜಯನಗರ ಸಾಮ್ರಾಜ್ಯ' ಭಾರೀ ಬಜೆಟ್‌ನಲ್ಲಿ ನಿರ್ಮಾಣ

ಸ್ಯಾಂಡಲ್‌ವುಡ್‌ನಲ್ಲಿ ಅಚ್ಚರಿಯ ಸಿನಿಮಾವೊಂದು ನಿರ್ಮಾಣಗೊಳ್ಳುತ್ತಿದೆ.

ಕಿರಿಕ್ ಪಾರ್ಟಿ, ಅವನೇ ಶ್ರೀಮನ್ನಾರಾಯಣ, ಅವತಾರ ಪುರುಷ ಸೇರಿದಂತೆ ಸಾಕಷ್ಟು ಬಿಗ್ ಬಜೆಟ್ ಸಿನಿಮಾಗಳನ್ನು ನಿರ್ಮಿಸಿರುವ ಪುಷ್ಕರ್ ಮಲ್ಲಿಕಾರ್ಜುನಯ್ಯ ಇದೀಗ ಹೊಸ ಸಾಹಸಕ್ಕೆ ಮುಂದಾಗಿದ್ದಾರೆ.

ವಿಜಯನಗರ ಸಾಮ್ರಾಜ್ಯವನ್ನು ಬೆಳ್ಳಿ ತೆರೆಗೆ ಪರಿಚಯಿಸೋಕೆ ರೆಡಿಯಾಗಿದ್ದಾರೆ. ಈ ಸಿನಿಮಾ ಅದ್ಧೂರಿ ಬಜೆಟ್‌ನಲ್ಲಿ ನಿರ್ಮಾಣ ಆಗುತ್ತಿರುವುದು ವಿಶೇಷ. ಚಿತ್ರದ ಮತ್ತೊಂದು ವಿಶೇಷ ಅಂ-ದರೆ, ಈ ಸಿನಿಮಾವನ್ನು ಅವರೇ ನಿರ್ದೇಶನ ಮಾಡುವುದರ ಜೊತೆಗೆ ನಾಯಕನಾಗಿ ಪರಿಚಯ ಆಗುತ್ತಿದ್ದಾರೆ. ಇದು ದಿಢೀರ್ ಅಂತ ತಯಾರಾಗುತ್ತಿರುವ ಚಿತ್ರವಲ್ಲ. ಕಳೆದ ಮೂರ್ನಾಲ್ಕು ವರ್ಷಗಳಿಂದ ಅದಕ್ಕೆ ಬೇಕಾದ ಪೂರ್ವ ತಯಾರಿಯಲ್ಲಿ ತೊಡಗಿಸಿಕೊಂಡಿದ್ದ ಅವರು, ಇದೀಗ ಸಿನಿಮಾವನ್ನು ಶೇ.70ರಷ್ಟು ಪೂರ್ಣಗೊಳಿಸಿದ್ದಾರೆ. ಪಕ್ಕಾ ತಯಾರಿ ಮಾಡಿಕೊಂಡೇ ಅಖಾಡಕ್ಕೆ ಇಳಿದಿದ್ದಾರೆ.

ಈವರೆಗೂ ಕನ್ನಡ ಚಿತ್ರೋದ್ಯಮದಲ್ಲಿ ಆಗದೇ ಇರುವಂಥ ಪ್ರಯೋಗವನ್ನು ಈ ಚಿತ್ರದಲ್ಲಿ ಮಾಡಿದ್ದಾರೆ ಪುಷ್ಕರ್ ಮಲ್ಲಿಕಾರ್ಜುನ್.

ಈ ಚಿತ್ರವನ್ನು ವರ್ಚುವಲ್ ಪ್ರೊಡಕ್ಷನ್ (ಅನ್ ರಿಯಲ್ ಇಂಜಿನ್ ಬಳಸಿ) ಚಿತ್ರೀಕರಿಸಿರುವುದು ವಿಶೇಷ.

ಈವರೆಗೆ ಕನ್ನಡ ಸಿನಿಮಾದಲ್ಲಿ ಬಳಕೆ ಆಗದ ತಂತ್ರಜ್ಞಾನ ಇದಾಗಿದ್ದು, ದುಬೈ ಮತ್ತು ಮುಂಬೈ ಮೂಲದ ತಂತ್ರಜ್ಞರು ಈ ಚಿತ್ರಕ್ಕೆ ಕಾರ್ಯನಿರ್ವಹಿಸಿದ್ದಾರೆ.



# ಜೆನ್ ಝೀಗಳಿಂದ ದೇಶದಲ್ಲಿ ಬದಲಾವಣೆ:

## ಬಿಜೆಪಿಯವರು ನ್ಯಾಯಯುತ ಚುನಾವಣೆ ಮಾಡಲು ಬಿಡಲ್ಲ; ಸಂತೋಷ್ ಲಾಡ್

ಹುಬ್ಬಳ್ಳಿ: ದೇಶದಲ್ಲಿ ಬದಲಾವಣೆ ಗಾಳಿ ಬೀಸುತ್ತಿದೆ. ಜೆನ್ ಝೀಯಿಂದ ಹೊಸ ಬದಲಾವಣೆಗಳು ಆಗುತ್ತಿದೆ. ಬಿಜೆಪಿಯವರು ಪ್ರಾಮಾಣಿಕ ಚುನಾವಣೆ ಮಾಡಿದರೆ ಅವರು ಖಂಡಿತಾ ಸೋಲುತ್ತಾರೆ. ಹೀಗಾಗಿ ನ್ಯಾಯಯುತ ಚುನಾವಣೆ ಮಾಡಲು ಅವರು ಬಿಡುವುದಿಲ್ಲ ಎಂದು ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಜನರ ಪ್ರಶ್ನೆಗಳಿಗೆ ಅವರು ಉತ್ತರಿಸುವುದಿಲ್ಲ. ಬದಲಾಗಿ ಧರ್ಮ, ದೇವರ ಹೆಸರಲ್ಲಿ ಮಾತ್ರ ಮಾತನಾಡುತ್ತಾರೆ ಎಂದು ತೀವ್ರ ವಾಗ್ದಾಳಿ ನಡೆಸಿದರು.

ಬಿಜೆಪಿಯವರು ಬರ ಅಧ್ಯಯನ ಮಾಡುತ್ತಿರುವುದು ಒಳ್ಳೆಯದು. ಅಧ್ಯಯನ ಮಾಡಿ ವರದಿಯನ್ನು ಕೇಂದ್ರ ಸರಕಾರಕ್ಕೆ ನೀಡಲಿ. ಕೇಂದ್ರದಿಂದ ರಾಜ್ಯಕ್ಕೆ ಬೆಳೆ ಪರಿಹಾರವಾದರೂ ಬರಲಿ ಎಂದು ಸಚಿವ ಸಂತೋಷ ಲಾಡ್ ತಿಳಿಸಿದರು. ಕೇಂದ್ರದಿಂದ ನಮಗೆ ಸಹಕಾರ ಸಿಗುತ್ತಿಲ್ಲ. ಕಾಂಗ್ರೆಸ್ ಆಡಳಿತವಿರುವ ರಾಜ್ಯಗಳಿಗೆ ಮಲತಾಯಿ ಧೋರಣೆ ಆಗುತ್ತಿದೆ. ಕೇಂದ್ರ ಸರ್ಕಾರದಿಂದ ಬೆಳೆ ಪರಿಹಾರ ದುಡ್ಡು ಬಂದಿಲ್ಲ. ಬಿಜೆಪಿ ರಾಜ್ಯಗಳಿಗೆ ನೀಡಿದಷ್ಟು ಅನುಧಾನ ನಮಗೆ ಬಂದಿಲ್ಲ. ಬೆಳೆ ವಿಮೆಗೆ ಇರುವ ನಿಯಮಗಳು



ಬದಲಾಗಬೇಕು. ಬಿಜೆಪಿಯವರು ಬರ ಅಧ್ಯಯನ ಮಾಡಿ ಕೇಂದ್ರ ಸರಕಾರಕ್ಕೆ ಸಲ್ಲಿಸಲಿ" ಎಂದರು.

ರೈತರು ಮಧ್ಯಂತರ ಪರಿಹಾರ ಕೇಳುತ್ತಿರುವುದು ಸರಿಯಿದೆ. ಮುಖ್ಯಮಂತ್ರಿಗಳು ಬರ ವೀಕ್ಷಣೆ ಮಾಡುವಂತೆ ತಾಕೀತು ಮಾಡಿದ್ದಾರೆ. ಎಲ್ಲಾ ತಾಲೂಕಿಗೆ ಹೋಗಿ ಬರ ಅಧ್ಯಯನ ಮಾಡಿ ವರದಿ ನೀಡುತ್ತೇವೆ" ಎಂದರು.

# ಕೆಮಿಕಲ್ ಫ್ಯಾಕ್ಟರಿಯಲ್ಲಿ ಅನಿಲ ಸೋರಿಕೆ;

## ಮೂವರು ಕಾರ್ಮಿಕರ ದುರ್ಮರಣ, ಇಬ್ಬರ ಸ್ಥಿತಿ ಗಂಭೀರ




ಯಾದಗಿರಿ: ಜಿಲ್ಲೆಯ ಕಡೆಯಚೂರು–ಬಡಿಯಾಳ ಕೈಗಾರಿಕಾ ಪ್ರದೇಶದಲ್ಲಿರುವ ಔಷಧ ಉತ್ಪಾದನಾ ಘಟಕದಲ್ಲಿ ಬುಧವಾರ ಸಂಭವಿಸಿದ ರಾಸಾಯನಿಕ ಸೋರಿ–ಕೆ ದುರಂತದಲ್ಲಿ ಮೂವರು ಕಾರ್ಮಿಕರು ಉಸಿರುಗಟ್ಟಿ ಮೃತಪಟ್ಟಿದ್ದು, ಇನ್ನಿಬ್ಬರು ಅಸ್ವಸ್ಥಗೊಂಡಿದ್ದಾರೆ.

ಕಡೆಯಚೂರು–ಬಡಿಯಾಳ ಕೈಗಾರಿಕಾ ಪ್ರದೇಶದಲ್ಲಿರುವ ಸಿ.ಐ.ಎಲ್. ಲ್ಯಾಬೊರೇಟರಿ ಪ್ರೈವೇಟ್ ಲಿಮಿಟೆಡ್ ಎಂಬ ಔಷಧ ತಯಾರಿಕಾ ಕಂಪನಿಯಲ್ಲಿ ಈ ದುರ್ಘಟನೆ ಸಂಭವಿಸಿದೆ.

ಘಟಕದಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಏಕಾಏಕಿ ರಾಸಾಯನಿಕ ಸೋರಿಕೆಯಾಗಿದ್ದು, ವಿಷಕಾರಿ ಅನಿಲದಿಂದ ಉಸಿರುಗಟ್ಟಿ ಮೂವರು ಕಾರ್ಮಿಕರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಮೃತರನ್ನು ತೆಲಂಗಾಣದ ಕಟ್ಲಾ ಗಣೇಶ್, ಮಧ್ಯಪ್ರದೇಶದ ವಿಕ್ರಮ್ ಸಿಂಗ್ ಮತ್ತು ಸಂ–ಜಯ್ ಸಿಂಗ್ ಎಂದು ಗುರುತಿಸಲಾಗಿದೆ.

ಘಟನೆಯಲ್ಲಿ ಆಂಧ್ರಪ್ರದೇಶ ಮೂಲದ ಮಂಚಲ್ ಹೇಮಂತ್ ಮತ್ತು ಮಂಚಲ್ ಶಿವಕುಮಾರ್ ಎಂಬ ಇಬ್ಬರು ಕಾರ್ಮಿಕರು ಅಸ್ವಸ್ಥಗೊಂಡಿದ್ದು, ಅವರನ್ನು ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅವರ ಆರೋಗ್ಯದ ಮೇಲೆ ವೈದ್ಯರು ನಿಗಾ ವಹಿಸಿದ್ದಾರೆ.

ಈ ಘಟನೆ ಸೈದಾಪುರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದ್ದು, ಮಾಹಿತಿ ತಿಳಿಯುತ್ತಿದ್ದಂತೆ ಉತ್ತರ–ಪೂರ್ವ ವಲಯ ಐಜಿಪಿ ಶಾಂತನು ಸಿನ್ಹಾ, ಯಾದಗಿರಿ ಜಿಲ್ಲಾಧಿಕಾರಿ ರಾಹುಲ್ ಪಾಂಡ್ವೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಸೇರಿದಂತೆ ಎನ್‌ಡಿಆರ್‌ಎಫ್ ಹಾಗೂ ಎಸ್‌ಡಿಆರ್‌ಎಫ್ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದರು.

ಈ ಕುರಿತು ಪ್ರತಿಕ್ರಿಯಿಸಿದ ಎಸ್‌ಪಿ ಪೃಥ್ವಿಕ್ ಶಂಕರ್ ಅವರು, ಸಿ.ಐ.ಎಲ್. ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಆಡಳಿತ ಮಂಡಳಿ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಎಂದು ತಿಳಿಸಿದ್ದಾರೆ.

ರಾಸಾಯನಿಕ ಸೋರಿಕೆಗೆ ಕಾರಣವೇನು ಎಂಬುದರ ಕುರಿತು ಪೊಲೀಸರು ಹಾಗೂ ಸಂಬಂಧಿತ ಇಲಾಖೆಗಳು ತನಿಖೆ ಆರಂಭಿಸಿವೆ.

# ಬಂಕಿಪುರ, ದಾಟಿಯಾದಲ್ಲಿ ಬಿಜೆಪಿ ಸೋಲು ಉದ್ದೇಶಪೂರ್ವಕ: ಅಖಿಲೇಶ್





ಲಖನೌ: ಸಮಾಜವಾದಿ ಪಕ್ಷದ ಅಧ್ಯಕ್ಷ ಅಖಿಲೇಶ್ ಯಾದವ್ ಬುಧವಾರ, ಬಿಹಾರದ ಬಂಕಿಪುರ ಮತ್ತು ಮಧ್ಯಪ್ರದೇಶದ ದಾಟಿಯಾದಲ್ಲಿ ಇತ್ತೀಚೆಗೆ ನಡೆದ ವಿಧಾನಸಭಾ ಉಪಚುನಾವಣೆಗಳಲ್ಲಿ ಬಿಜೆಪಿ "ಉದ್ದೇಶಪೂರ್ವಕವಾಗಿ" ಸೋತಿದೆ ಎಂದು ಆರೋಪಿಸಿದ್ದಾರೆ.

ಚುನಾವಣೆಗಳನ್ನು ಪ್ರಶ್ನಿಸಲು ಸಾಧ್ಯವಿಲ್ಲ ಎಂಬ ತಪ್ಪು ಕಲ್ಪನೆಯನ್ನು ಸೃಷ್ಟಿಸಲು ಮತ್ತು ಚುನಾವಣಾ ಪ್ರಕ್ರಿಯೆಯ ಮೇಲಿನ ಟೀಕೆಗಳನ್ನು ಬೇರೆಡೆಗೆ ತಿರುಗಿಸಲು ಬಿಜೆಪಿ ಈ ರೀತಿ ಮಾಡಿದೆ ಎಂದು ಅಖಿಲೇಶ್ ಯಾದವ್ ಹೇಳಿದ್ದಾರೆ.

ಹಿರಿಯ ಸಮಾಜವಾದಿ ನಾಯಕ ಜಾನೇಶ್ವರ ಮಿಶ್ರಾ ಅವರ ಜನ್ಮ ದಿನಾಚರಣೆಯಂದು ಇಲ್ಲಿನ ಪಕ್ಷದ ರಾಜ್ಯ ಪ್ರಧಾನ ಕಚೇರಿಯಲ್ಲಿ ಆಯೋಜಿಸಲಾದ ಬ್ರಾಹ್ಮಣ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಯಾದವ್, ಆಡಳಿತ ಪಕ್ಷವು ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳ ಚುನಾವಣೆಗಳಲ್ಲಿ ಬಳಸಲಾಗಿದೆ ಎನ್ನಲಾದ "ಮಾದರಿ"ಯನ್ನು ಬಳಸುವುದರಿಂದ ಉದ್ದೇಶಪೂರ್ವಕವಾಗಿ ದೂರವಿತ್ತು ಎಂದು ಆರೋಪಿಸಿದರು.

"ಅಪ್ರಾಮಾಣಿಕತೆಯಿಲ್ಲದೆ ಚುನಾವಣೆಗಳನ್ನು ಗೆಲ್ಲಬಹುದೇ ಎಂದು ಪರಿಶೀಲಿಸಲು ಬಯಸಿದ್ದರಿಂದ ಬಿಜೆಪಿ ಉದ್ದೇಶಪೂರ್ವಕವಾಗಿ ಈ ಉಪಚುನಾವಣೆಗಳಲ್ಲಿ ಸೋತಿತು. ಉತ್ತರ ಪ್ರದೇಶ ಮತ್ತು ಪಶ್ಚಿಮ ಬಂಗಾಳದಲ್ಲಿ ಅಳವಡಿಸಿಕೊಂಡ ಮಾದರಿಯನ್ನು ಬಂಕಿಪುರ ಮತ್ತು ದಾಟಿಯಾದಲ್ಲಿ ಅಳವಡಿಸಿಕೊಂಡಿಲ್ಲ. ಜನರನ್ನು ದಾರಿ ತಪ್ಪಿಸಲು ಮಾತ್ರ ಬಿಜೆಪಿ ಈ ಉಪಚುನಾವಣೆಗಳಲ್ಲಿ ಸೋತಿದೆ" ಎಂದು ಯಾದವ್ ಆರೋಪಿಸಿದ್ದಾರೆ.

ಚುನಾವಣಾ ಪ್ರಕ್ರಿಯೆಯ ಬಗ್ಗೆ ವಿರೋಧ ಪಕ್ಷದ ಟೀಕೆಯನ್ನು ದುರ್ಬಲಗೊಳಿಸಲು ಬಿಜೆಪಿ ಬಯಸಿದೆ ಎಂದು ಹೇಳಿದ ಅವರು, "ಈಗ ಅವರು ವಿರೋಧ ಪಕ್ಷಗಳು ಇವಿಎಂಗಳ ಬಗ್ಗೆ ಪ್ರಶ್ನೆಗಳನ್ನು ಎತ್ತಲು ಸಾಧ್ಯವಿಲ್ಲ ಎಂಬ ಭಾವನೆ ಸೃಷ್ಟಿಸಲಾಗುತ್ತಿದೆ. ಸಾರ್ವಜನಿಕರನ್ನು ಮೋಸಗೊಳಿಸಲು ಅವರು ಉದ್ದೇಶಪೂರ್ವಕವಾಗಿ ಈ ಉಪಚುನಾವಣೆಗಳಲ್ಲಿ ಸೋತಿದ್ದಾರೆ" ಎಂದು ಹೇಳಿದರು.

ಬಂಕಿಪುರ ಉಪಚುನಾವಣೆಯಲ್ಲಿ ಬಿಜೆಪಿಯ ಸೋಲಿನ ಬಗ್ಗೆ ಬಿಜೆಪಿಯನ್ನು ಟೀಕಿಸಿದ ಯಾದವ್, ಆಡಳಿತ ಪಕ್ಷದ ನಾಯಕರು ಸ್ವತಃ ಸೋಲನ್ನು ಆಚರಿಸುತ್ತಿದ್ದಾರೆ ಎಂದು ಹೇಳಿದರು.

"ಬಂಕಿಪುರ ಚುನಾವಣೆಯಲ್ಲಿ ಸೋತ ನಂತರ, ಬಿಜೆಪಿ ನಾಯಕರು ತಮ್ಮ ಸಹೋದ್ಯೋಗಿಗಳಿಗೆ ಸಿಹಿತಿಂಡಿಗಳನ್ನು ವಿತರಿಸುತ್ತಿದ್ದಾರೆ. ಸ್ವಲ್ಪ ನಿರೀಕ್ಷಿಸಿ, ಚುನಾವಣೆ ಬರುವ ಹೊತ್ತಿಗೆ, ಉತ್ತರ ಪ್ರದೇಶ ಸರ್ಕಾರದಲ್ಲಿ ಕುಳಿತಿರುವ ಎಲ್ಲರೂ ಸಿಹಿತಿಂಡಿಗಳ ಪೆಟ್ಟಿಗೆಗಳೊಂದಿಗೆ ತಮ್ಮನ್ನು ಸೇರಿಸಿಕೊಳ್ಳುವಂತೆ ಕೇಳಿಕೊಳ್ಳುತ್ತಾರೆ. ಆದರೆ ಸಮಾಜವಾದಿ ಪಕ್ಷದ ಕಾರ್ಯಕರ್ತರು ಅವರಲ್ಲಿ ಒಬ್ಬರನ್ನು ಸಹ ನಮ್ಮ ಪಕ್ಷಕ್ಕೆ ತೆಗೆದುಕೊಳ್ಳುವುದಿಲ್ಲ" ಎಂದು ಅವರು ಹೇಳಿದರು.

# ಲೋಕಸಭೆ ಸಚಿವಾಲಯದ ನಿರ್ದೇಶಕ ಆತ್ಮಹತ್ಯೆ

ನೋಯ್ಡಾ : ಲೋಕಸಭೆ ಸಚಿವಾಲಯದಲ್ಲಿ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದ ಅಧಿಕಾರಿಯೊಬ್ಬರು ನೋಯ್ಡಾದ ತಮ್ಮ ನಿವಾಸದಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ.

ಸ್ಥಳದಿಂದ ಸಾಲದ ಹೊರೆ ಉಲ್ಲೇಖವಿರುವ ಡೆತ್‌ನೋಟ್‌ವೊಂದನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.ಮೃತರನ್ನು ಗೌರವ್ ಗೌತಮ್(40)ಎಂದು ಗುರುತಿಸಲಾಗಿದೆ. ಅವರು ಸೆಕ್ಟರ್–82ರ ಕೇಂದ್ರಿಯ ವಿಹಾರ್–2 ವಸತಿ ಸಮುಚ್ಚಯದಲ್ಲಿರುವ ತಮ ಫ್ಲಾಟ್‌ನಲ್ಲಿ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಫೇಸ್–2 ಪೊಲೀಸ್ ಠಾಣೆಯ ಅಧಿಕಾರಿಗಳ ಪ್ರಕಾರ, ಗೌತಮ್ ಅವರನ್ನು ಚಿಕಿತ್ಸೆಗೆ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಅಲ್ಲಿಂದ ಬಂದ ಮಾಹಿತಿಯ ಮೇರೆಗೆ ಪೊಲೀಸರು ಪ್ರಕರಣ ದಾಖಲಿಸಿಕೊಂಡರು.



# ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಆ.8 ಮತ್ತು 9ರಂದು ಲಿಖಿತ ಪರೀಕ್ಷೆ

ಬೆಂಗಳೂರು : ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಆ. 8 ಮತ್ತು 9ರಂದು ಲಿಖಿತ ಪರೀಕ್ಷೆ ನಡೆಸಲು ಸಕಲ ಸಿದ್ಧತೆ ಮಾಡಿಕೊಂಡಿದೆ.ಈ ಸಂಬಂಧ ಪರೀಕ್ಷಾ ಸಿದ್ಧತಾ ಸಭೆಯನ್ನು ನಡೆಸಿದ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ಅವರು, ಪಾರದರ್ಶಕ ಮತ್ತು ನ್ಯಾಯಸಮತ ಪರೀಕ್ಷೆ ನಡೆಸಲು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದ್ದಾರೆ.



ಅಕ್ರಮಗಳಿಗೆ ಅವಕಾಶ ಇಲ್ಲದಂತೆ ಪರೀಕ್ಷೆ ನಡೆಸಲು ಸೂಚನೆ ನೀಡಿದ್ದು, ಪರೀಕ್ಷೆ ಮುಗಿದ ಕೂಡಲೇ ಓಎಂಆರ್ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿ ಕೆಇಎ ವೆಬ್‌ಸೈಟ್‌ಗೆ ಅಪ್ ಲೋಡ್ ಮಾಡಬೇಕು ಎಂದು ಅವರು ಸೂಚಿಸಿದ್ದಾರೆ.

ಕಲ್ಯಾಣ ಕರ್ನಾಟಕ ವೃಂದದ ಅಭ್ಯರ್ಥಿಗಳಿಗೆ (4,217) ಆಗಸ್ಟ್ 8ರಂದು ಮತ್ತು ಉಳಿಕೆ ಮೂಲ ವೃಂದದ ಅಭ್ಯರ್ಥಿಗಳಿಗೆ (14,082) ಆಗಸ್ಟ್ 9ರಂದು ಪರೀಕ್ಷೆ ನಡೆಯಲಿದೆ.

# ಕಾಫಿನಾಡಿನಲ್ಲಿ ಐವರು ಅಕ್ರಮ ಬಾಂಗ್ಲಾದೇಶದ ಪ್ರಜೆಗಳು ಪತ್ತೆ

ಚಿಕ್ಕಮಗಳೂರು : ಜಿಲ್ಲೆಯ ಕಾಫಿ ತೋಟಗಳು, ಹೋಂಸ್ಟೇಗಳು ಹಾಗೂ ರೆಸಾರ್ಟ್‌ಗಳಲ್ಲಿ ಅಕ್ರಮವಾಗಿ ಬಾಂಗ್ಲಾದೇಶದ ಪ್ರಜೆಗಳು ನೆಲೆಸಿದ್ದಾರೆ ಎಂಬ ಆರೋಪಗಳ ನಡುವೆಯೇ, ಕೇಂದ್ರ ಗುಪ್ತಚರ ಇಲಾಖೆಯ ಮಾಹಿತಿಯ ಆಧಾರದ ಮೇಲೆ ಪೊಲೀಸರು ನಡೆಸಿದ ಕಾರ್ಯಾಚರಣೆಯಲ್ಲಿ ಐವರು ಅಕ್ರಮ ಬಾಂಗ್ಲಾದೇಶದ ಪ್ರಜೆಗಳನ್ನು ವಶಕ್ಕೆ ಪಡೆದಿದ್ದಾರೆ.

ಬಂಧಿತರನ್ನು ಜಹಾಂಗೀರ್, ಫೈಸುದ್ದಿನ್, ನುಮನ್ ಬಶೀರ್, ಮಹಮದ್ ಹುಮ್ಮೈನ್ ಹಾಗೂ ಮಹಮದ್ ಹಸೀಬುಲ್ ಎಂದು ಗುರುತಿಸಲಾಗಿದೆ. ಇವರು ಕಾಫಿ ತೋಟಗಳು ಹಾಗೂ ಕಟ್ಟಡ ನಿರ್ಮಾಣ ಕಾಮಗಾರಿಗಳಲ್ಲಿ ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದು, ಅವರ ಬಳಿಯಿಂದ ಬಾಂಗ್ಲಾದೇಶದ ಗುರುತಿನ ಚೀಟಿಗಳು ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

ಕಳೆದ ಎರಡು ತಿಂಗಳಿಂದ ಹೊರರಾಜ್ಯ ಹಾಗೂ ಹೊರಜಿಲ್ಲೆಯಿಂದ ಆಗಮಿಸುತ್ತಿರುವ ಕಾರ್ಮಿಕರ ಮಾಹಿತಿ ಸಂಗ್ರಹಿಸುತ್ತಿದ್ದ ಪೊಲೀಸ್ ಇಲಾಖೆ, ಕೇಂದ್ರ ಗುಪ್ತಚರ ಇಲಾಖೆಯಿಂದ ದೊ–ರೆತ ಮಾಹಿತಿಯ ಮೇರೆಗೆ ಬಣಕಲ್ ಸಮೀಪ ಪರಿಶೀಲನೆ ನಡೆಸಿದ ವೇಳೆ ಇವರನ್ನು ಪತ್ತೆಹಚ್ಚಿದೆ. ಬಂಧಿತರನ್ನು ಜಿಲ್ಲೆಗೆ ಕರೆತಂದವರು ಯಾರು, ಉದ್ಯೋಗಕ್ಕೆ ಸೇರಿಸಿದವರು ಹಾಗೂ ಸಂಪರ್ಕ ಜಾಲದ ಬಗ್ಗೆ ತನಿಖೆ ಮುಂದುವರಿದಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜೀತೇಂದ್ರ ಕುಮಾರ್ ದಯಾಮಾ ಮಾತನಾಡಿ, ಪ್ರಕರಣದ ಸಮಗ್ರ ತನಿಖೆ ನಡೆಯುತ್ತಿದ್ದು, ಕಾನೂನು ಪ್ರಕಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಈ ಮಧ್ಯೆ, ಅಕ್ರಮ ಬಾಂಗ್ಲಾದೇಶದ ಪ್ರಜೆಗಳನ್ನು ಪತ್ತೆಹಚ್ಚಿದ ಪೊಲೀಸ್ ಇಲಾಖೆಯ ಕ್ರಮವನ್ನು ಬಜರಂಗದಳ ಮುಖಂಡ ಶಾಮ್ ವಿ.ಗೌಡ ಸ್ವಾಗತಿಸಿದ್ದು, ಬಂಧಿತರಿಂದ ಮಾಹಿತಿ ಪಡೆದು ಅಕ್ರಮ ವಲಸಿಗರ ಸಂಪೂರ್ಣ ಜಾಲವನ್ನು ಪತ್ತೆಹಚ್ಚುವಂತೆ ಆಗ್ರಹಿಸಿದ್ದಾರೆ.

# ಸರ್ಕಾರಿ ಶಾಲೆ, ಅಂಗನವಾಡಿಗಳಿಂದ ಕಳ್ಳತನ

## 9 ಲಕ್ಷಕ್ಕೂ ಅಧಿಕ ಮೌಲ್ಯದ ವಸ್ತು ಸೇರಿ 55 ಗ್ಯಾಸ್ ಸಿಲಿಂಡರ್ ಜಪ್ತಿ

ಬೀದರ್: ಸರ್ಕಾರಿ ಶಾಲೆ, ಅಂಗನವಾಡಿಗಳಿಂದ ಕಳ್ಳತನ ಮಾಡಿ ಅಕ್ರಮವಾಗಿ ಮಾರಾಟ ಮಾಡುತ್ತಿದ್ದ 55 ಗ್ಯಾಸ್ ಸಿಲಿಂಡರ್ ಸೇರಿ 9 ಲಕ್ಷ ರೂ.ಗೂ ಅಧಿಕ ಮೌಲ್ಯದ ವಸ್ತುಗಳನ್ನು ಬೀದರ್ ಪೊಲೀಸರು ಜಪ್ತಿ ಮಾಡಿದ್ದಾರೆ.



ಸರ್ಕಾರಿ ಶಾಲೆ, ಅಂಗನವಾಡಿ ಹಾಗೂ ವಿವಿಧ ಕಡೆಗಳಿಂದ ಸಿಲಿಂಡರ್‌ಗಳನ್ನು ಕಳ್ಳತನ ಮಾಡಿ, ಬೀದರ್‌ನಿಂದ ಮಹಾರಾಷ್ಟ್ರದ ಉದ್ಗೀರ್‌ಗೆ ಅಕ್ರಮವಾಗಿ ಸಾಗಾಟ ಮಾಡಲಾಗ್ತಿತ್ತು. ಈ ವೇಳೆ ದಾಳಿ ನಡೆಸಿದ ಪೊಲೀಸರು 55 ಸಿಲಿಂಡರ್‌ಗಳನ್ನು ಜಪ್ತಿ ಮಾಡಲಾಗಿದೆ. ಈ ಸಂಬಂಧ ಮೇಹಕರ್, ಭಾಲ್ಕಿ ಗ್ರಾಮೀಣ, ಖಟಕ್ ಚಿಂಚೋಳಿ ಪೊಲೀಸ್ ಠಾಣೆ ಸೇರಿದಂತೆ ಹಲವು ಠಾಣೆಗಳಲ್ಲಿ 9 ಪ್ರಕರಣ ದಾಖಲಾಗಿವೆ. ಇದೇ ವೇಳೆ ಕೃತ್ಯ–ಕ್ಕೆ ಬಳಸಿದ್ದ ಕಾರು ಸೇರಿದಂತೆ ಒಟ್ಟು 9 ಲಕ್ಷಕ್ಕೂ ಅಧಿಕ ಮೌಲ್ಯದ ಸಿಲಿಂಡರ್‌ಗಳನ್ನು ಜಪ್ತಿ ಮಾಡಲಾಗಿದೆ.

ಎಸ್ಪಿ ಪ್ರದೀಪ್ ಗುಂಟಿ ನೇತೃತ್ವದಲ್ಲಿ ಬೀದರ್ ಪೊಲೀಸರು ಭರ್ಜರಿ ಕಾರ್ಯಾಚರಣೆ ನಡೆಸಿ 9 ಪ್ರಕರಣಗಳಲ್ಲಿ ನಾಲ್ಕು ಜನ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ.

# ಥರ್ಡ್ ಪಾರ್ಟಿ ವಿಮೆ ಇಲ್ಲದ ವಾಹನಗಳಿಗೆ ಇಂಧನ ಇಲ್ಲ : ಸುಪ್ರಿಂ ಸೂಚನೆ

ನವದೆಹಲಿ : ದೇಶದಲ್ಲಿ ವಾಹನಗಳ ಥರ್ಡ್ ಪಾರ್ಟಿ ವಿಮೆ ಕಡ್ಡಾಯ ನಿಯಮವನ್ನು ಪರಿಣಾಮ ಕಾರಿಯಾಗಿ ಜಾರಿಗೊಳಿಸುವಂತೆ ಸೂಚಿಸಿರುವ ಸುಪ್ರಿಂ ಕೋರ್ಟ್ ವಿಮೆ ಇಲ್ಲದ ವಾಹನಗಳಿಗೆ ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆ ನಿರ್ಬಂಧಿಸುವಂತೆ ಸೂಚಿಸಿದೆ. ವಿಮೆ ಇಲ್ಲ ಇಂಧನವಿಲ್ಲ ಎಂಬ ಪೈಲಟ್ ಯೋಜನೆ ರೂಪಿಸುವ ಸಾಧ್ಯತೆ ಯನ್ನು ಪರಿಶೀಲಿಸುವಂತೆ ಕೇಂದ್ರ ಸರ್ಕಾರಕ್ಕೆ ಕೋರ್ಟ್ ಆದೇಶ ನೀಡಿದೆ.

ಆದರೆ, ದೇಶಾದ್ಯಂತ ಈ ನಿಯಮ ತಕ್ಷಣದಿಂದ ಜಾರಿಗೆ ಬಂದಿಲ್ಲ. ಕೇಂದ್ರ ಸರ್ಕಾರ, ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ಹಾಗೂ ಭಾರತೀಯ ವಿಮಾ ನಿಯಂತ್ರಣ ಮತ್ತು ಅಭಿವೃದ್ಧಿ ಪ್ರಾಧಿಕಾರ ಅಗತ್ಯ ರೂಪುರೇಷೆ ಸಿದ್ಧಪಡಿಸಿ ಅಧಿಕೃತ ಅಧಿಸೂಚನೆ ಹೊರಡಿಸಿದ ಬಳಿಕವಷ್ಟೆ ಇಂತಹ ಕ್ರಮ ಜಾರಿಗೆ ಬರಲಿದೆ. ಕ್ಯಾಮೆರಾ ಮೂಲಕ ವಿಮೆ ಪರಿಶೀಲನೆ:ಹೆದ್ದಾರಿಗಳಲ್ಲಿ ಅಳವಡಿಸಿರುವ ಸ್ವಯಂಚಾಲಿತ ನಂಬರ್ ಪ್ಲೇಟ್ ಗುರುತಿಸುವ ಕ್ಯಾಮೆರಾಗಳನ್ನು ವಿಮಾ ಡೇಟಾಬೇಸ್‌ಗೆ ಸಂಪರ್ಕಿಸುವ ವ್ಯವಸ್ಥೆ ರೂಪಿಸುವಂತೆ ಸೂಚಿಸಲಾಗಿದೆ. ಇದರಿಂದ ವಾಹನದ ನೋಂದಣಿ ಸಂಖ್ಯೆಯನ್ನು ಗುರುತಿಸಿ ಅದರ ವಿಮೆ ಮಾನ್ಯವಾಗಿದೆಯೇ ಎಂಬುದನ್ನು ಸ್ವಯಂಚಾಲಿತವಾಗಿ ಪರಿಶೀಲಿಸಬಹುದಾಗಿದೆ.ವಿಮೆ ಇಲ್ಲದ ವಾಹನಗಳು ಪತ್ತೆಯಾದಲ್ಲಿ ಸ್ವಯಂಚಾಲಿತವಾಗಿ ಇ–ಚಲನ್ ಸೃಷ್ಟಿಸುವ ವ್ಯವಸ್ಥೆ ರೂಪಿಸುವ ಬಗ್ಗೆಯೂ ಗಮನ ಹರಿಸಲಾಗಿದೆ.

ದಂಡ ಮತ್ತಷ್ಟು ಕಠಿಣ? ಥರ್ಡ್ ಪಾರ್ಟಿ ವಿಮೆ ಇಲ್ಲದೆ ವಾಹನ ಚಲಾಯಿಸುವವರ ವಿರುದ್ಧ ಮೋಟಾರು ವಾಹನ ಕಾಯ್ದೆಯಡಿ ಕಠಿಣ ಕ್ರಮ ಕೈಗೊಳ್ಳುವ ಅಗತ್ಯವನ್ನು ಒತ್ತಿ ಹೇಳಲಾಗಿದೆ.



ಪ್ರಸ್ತಾವಿತ ದಂಡವನ್ನು 5,000 ಅಥವಾ ವಾರ್ಷಿಕ ವಿಮಾ ಪ್ರಿಮಿಯಂನ ಮೂರು ಪಟ್ಟು ವಿಧಿಸುವ ಕುರಿತು ಚರ್ಚೆ ನಡೆದಿದೆ.ಹೊಸ ವಾಹನಗಳ ವಿಮಾ ಅವಧಿ ಹೆಚ್ಚಳ?ಹೊಸ ಕಾರುಗಳಿಗೆ ಥರ್ಡ್ ಪಾರ್ಟಿ ವಿಮೆಯ ಅವಧಿಯನ್ನು 3 ವರ್ಷದಿಂದ 4 ವರ್ಷಕ್ಕೆ, ಹೊಸ ದ್ವಿಚಕ್ರ ವಾಹನಗಳಿಗೆ 5 ವರ್ಷದಿಂದ 6 ವರ್ಷಕ್ಕೆ ಹೆಚ್ಚಿಸುವ ಪ್ರಸ್ತಾವನೆಯೂ ಇದೆ.ಇದರ ಜತೆಗೆ ಸಾಮಾನ್ಯ ವಾಹನ ಮಾಲೀಕರಿಗೂ ಸುಲಭವಾಗಿ ಅರ್ಥವಾಗುವಂತಹ ಸರಳ ವಿಮಾ ಯೋಜನೆಗಳನ್ನು ರೂಪಿಸುವಂತೆ ಗೆ ಸೂಚಿಸಲಾಗಿದೆ. ವಿಮಾ ಪಾಲಿಸಿಗಳ ನಿಯಮಗಳು ಮತ್ತು ಷರತ್ತುಗಳನ್ನು ಜನಸಾಮಾನ್ಯರಿಗೆ ಗೊಂದಲವಾಗದ ರೀತಿಯಲ್ಲಿ ಸರಳಗೊಳಿಸುವುದು ಪ್ರಮುಖ ಉದ್ದೇಶವಾಗಿದೆ. ಅಪಘಾತ ಸಂತ್ರಸ್ತರ ಹಿತಾಸಕ್ತಿ ಮುಖ್ಯ:ರಸ್ತೆ ಅಪಘಾತಗಳಲ್ಲಿ ಸಂತ್ರಸ್ತರಾಗುವವರಿಗೆ ಕಾನೂನು ಮತ್ತು ಆರ್ಥಿಕ ರಕ್ಷಣೆ ದೊರೆಯುವಂತೆ ಮಾಡುವುದೇ ಥರ್ಡ್ ಪಾರ್ಟಿ ವಿಮೆಯ ಪ್ರಮುಖ ಉದ್ದೇಶವಾಗಿದೆ. ದೇಶದಲ್ಲಿ ವಿಮೆ ಇಲ್ಲದೆ ಸಂಚರಿಸುವ ವಾಹನಗಳ ಸಂಖ್ಯೆಯನ್ನು ಕಡಿಮೆ ಮಾಡಿ, ರಸ್ತೆ ಸುರಕ್ಷತೆ ಹಾಗೂ ವಿಮಾ ಪಾಲನೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಈ ಕ್ರಮಗಳನ್ನು ಪರಿಗಣಿಸಲಾಗಿದೆ. ಆದರೆ ಸಾರ್ವಜನಿಕರು ಗಮನಿಸಬೇಕಾದ ಅಂಶವೆಂದರೆ, ವಿಮೆ ಇಲ್ಲಇಂಧನವಿಲ್ಲ ನಿಯಮವು ಸದ್ಯ ದೇಶಾದ್ಯಂತ ಜಾರಿಯಾಗಿಲ್ಲ. ಕೇಂದ್ರ ಸರ್ಕಾರ, ಮತ್ತು ರೂಪುರೇಷೆ ಅಂತಿಮಗೊಳಿಸಿ ಅಧಿಕೃತ ಅಧಿಸೂಚನೆ ಹೊರಡಿಸಿದ ನಂತರವಷ್ಟೆ ಹೊಸ ವ್ಯವಸ್ಥೆಯ ಜಾರಿ ಸಾಧ್ಯವಾಗಲಿದೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.